


# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 | Issue: 265 | ₹ ಬೆಲೆ: 4 | Friday, 15, December,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23


## ಬಿಜೆಪಿಗೆ ಹೋಗುವ ಪ್ರಶ್ನೆಯೇ ಇಲ್ಲ



ಹುಬ್ಬಳ್ಳಿ: 'ನಾನು ಮತ್ತೆ ಬಿಜೆಪಿ ಸೇರುತ್ತೇನೆ ಎಂದು ಸುಳ್ಳು ಸುದ್ದಿ ಹಬ್ಬಿಸಿ, ಆ ಪಕ್ಷದಿಂದ ಹೊರ ಹೋಗುವವರನ್ನು ತಡೆಯುವ ಕೆಲಸವಾಗುತ್ತಿದೆ. ಮತ್ತೆ ಬಿಜೆಪಿಗೆ ಹೋಗುವ ಪ್ರಶ್ನೆಯೇ ಇಲ್ಲ' ಎಂದು ವಿಧಾನ ಪರಿಷತ್ ಸದಸ್ಯ ಜಗದೀಶ ಶೆಟ್ಟರ್ ಹೇಳಿದರು.

ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಈ ರೀತಿ ಹೇಳಿಕೆ ನೀಡುವ ಮೂಲಕ ಸಾರ್ವಜನಿಕರಲ್ಲಿ ಗೊಂದಲ ಮೂಡಿಸುವ ಕೆಲಸವನ್ನು ಬಿಜೆಪಿ ಮಾಡುತ್ತಿದೆ. ಈ ಕುರಿತು ಈವರೆಗೂ ನನ್ನನ್ನು ಯಾರೂ ಭೇಟಿಯಾಗಿಲ್ಲ. ಭೇಟಿಯಾಗುವ ಅವಶ್ಯಕತೆಯೂ ಇಲ್ಲ' ಎಂದರು. 'ಯಾರದ್ದೋ ವೈಯಕ್ತಿಕ ಹಿತಾಸಕ್ತಿಗಾಗಿ ನನಗೆ ಟಿಕೆಟ್ ತಪ್ಪಿಸಿ ಅಪಮಾನ ಮಾಡಲಾಯಿತು. ಅದನ್ನು ಸಹಿಸಲು ಸಾಧ್ಯವಾಗದೆ ಅಲ್ಲಿಂದ ಹೊರಬಂದಿದ್ದೇನೆ. ಪಕ್ಷಕ್ಕಾಗಿ ದುಡಿದ ವ್ಯಕ್ತಿಗೆ ಟಿಕೆಟ್ ನೀಡಿಲ್ಲ ಎಂದಾದರೆ ತತ್ವ, ಸಿದ್ಧಾಂತ ಏಕೆ ಬೇಕು. ಕೆ.ಎಸ್.ಈಶ್ವರಪ್ಪ ಅವರಿಗೂ ನನ್ನಂತೆ ಆಗಿದ್ದರೆ ಅವರಿಗೆ ಗೊತ್ತಾಗುತ್ತಿತ್ತು' ಎಂದು ಹೇಳಿದರು. 'ಚಿತ್ತಾಪುರದಲ್ಲಿ ಪ್ರಿಯಾಂಕ್ ಖರ್ಗೆ ವಿರುದ್ಧ 80 ಕ್ರಿಮಿನಲ್ ಪ್ರಕರಣ ಇದ್ದ ವ್ಯಕ್ತಿಗೆ ಟಿಕೆಟ್ ನೀಡಲಾಯಿತು. ಬೇರೆ ಪಕ್ಷದಿಂದ ಬಂದವರಿಗೆ ಮಣೆ ಹಾಕಲಾಯಿತು. ಅಡ್ವಾಣಿ, ವಾಜಪೇಯಿ ಅವರ ಕಾಲದಲ್ಲಿದ್ದ ಭ್ರಷ್ಟಾಚಾರ ರಹಿತ ವ್ಯವಸ್ಥೆ ಈಗಿನ ಬಿಜೆಪಿಯಲ್ಲಿ ಇಲ್ಲ' ಎಂದರು. 'ರಿಪೇರಿ ಮಾಡಲು ಸಾಧ್ಯವಾಗದಷ್ಟು ಬಿಜೆಪಿ ಹಾಳಾಗಿದೆ. ಬಿ.ಎಸ್.ಯಡಿಯೂರಪ್ಪ ಅವರಂತಹ ಹಿರಿಯರನ್ನು ಬಹಿರಂಗವಾಗಿ ಟೀಕೆ ಮಾಡಲಾಗುತ್ತಿದೆ. ಕರ್ನಾಟಕದಲ್ಲಿ ಬಿಜೆಪಿ ಉದ್ಧಾರ ಆಗಲು ಸಾಧ್ಯವಿಲ್ಲ' ಎಂದು ಹೇಳಿದರು. 'ಅಧಿವೇಶನದಲ್ಲಿ ಮಹದಾಯಿ, ಹುಬ್ಬಳ್ಳಿ–ಅಂಕೋಲಾ ರೈಲು ಯೋಜನೆ, ಬೆಣ್ಣಿಹಳ್ಳ ಸೇರಿದಂತೆ ಉತ್ತರ ಕರ್ನಾಟಕ ಭಾಗದ ಸಮಸ್ಯೆಗಳ ಕುರಿತು ಚರ್ಚೆ ಆಗಲಿಲ್ಲ. ಈ ಬಗ್ಗೆ ಬೇಸರ ಇದೆ. ಜನಪ್ರತಿನಿಧಿಗಳು ಭಾಷಣ ಮಾಡುವುದು ಬಿಟ್ಟು ಯೋಜನೆಗಳನ್ನು ಜಾರಿಗೊಳಿಸಿದರೆ ಉತ್ತರ ಕರ್ನಾಟಕ ಭಾಗದ ಸಮಸ್ಯೆಗಳನ್ನು ಪರಿಹರಿಸಲು ಸಾಧ್ಯ' ಎಂದು ಹೇಳಿದರು. 'ನಾನು ಕೈಗಾರಿಕಾ ಸಚಿವನಾಗಿದ್ದಾಗ ಎಫ್‌ಎಂಸಿಜಿ ಕ್ಲಸ್ಟರ್‌ಗೆ 200 ಎಕರೆ ಜಮೀನು ಮಂಜೂರು ಮಾಡಲಾಗಿತ್ತು. ಬಿಜೆಪಿ ಸರ್ಕಾರ ಇದ್ದಾಗ ಜಮೀನಿನ ದರ ಹೆಚ್ಚಿಸಲಾಯಿತು. ಹೀಗಾಗಿ ಯಾವ ಕೈಗಾರಿಕೆಗಳು ಬರುತ್ತಿಲ್ಲ' ಎಂದರು. 'ಸಂಸತ್ ಭವನದಲ್ಲಿ ನಡೆದ ಭದ್ರತಾ ವೈಫಲ್ಯ ಘಟನೆ ಖಂಡನೀಯ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಇಂತಹ ಕೃತ್ಯಗಳು ನಡೆಯಬಾರದು. ಇದಕ್ಕೆ ಮೂಲ ಕಾರಣ, ಇದರ ಹಿಂದೆ ಯಾರಿದ್ದಾರೆ ಎಂಬ ಬಗ್ಗೆ ಸಮಗ್ರ ತನಿಖೆಯಾಗಬೇಕು. ತಪ್ಪು ಮಾಡಿದವರಿಗೆ ಕಠಿಣ ಶಿಕ್ಷೆಯಾಗಬೇಕು' ಎಂದು ಒತ್ತಾಯಿಸಿದರು.

'ಹೊಸ ಸಂಸತ್ ಭವನದಲ್ಲಿ ಭದ್ರತಾ ವ್ಯವಸ್ಥೆ ಸರಿ ಇಲ್ಲ ಎಂಬ ಅಪನಂಬಿಕೆ ಜನರಲ್ಲಿ ಮೂಡಿದರೆ ಕಾನೂನು ಸುವ್ಯವಸ್ಥೆ ಹಾಳಾಗುತ್ತದೆ. ಕೇಂದ್ರ ಸರ್ಕಾರಕ್ಕೂ ಕೆಟ್ಟ ಹೆಸರು ಬರುತ್ತದೆ. ಸಂಸತ್ ಭವನ ಪ್ರವೇಶಿಸಲು ವ್ಯಕ್ತಿಗಳ ಹಿನ್ನೆಲೆ ಪರಿಶೀಲಿಸಿ ಪಾಸ್ ನೀಡಬೇಕು' ಎಂದರು.

## ಮೇಕೆದಾಟು ಅನುಷ್ಠಾನಕ್ಕೆ ಬದ್ಧ



**ಬಿಜೆಪಿ ಸದಸ್ಯ ಎನ್. ರವಿಕುಮಾರ್ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ನಮ್ಮ ನೀರು, ನಮ್ಮ ಹಕ್ಕು. ನಿಮ್ಮ ನೀರು, ನಿಮ್ಮ ಹಕ್ಕು ಎಂಬ ತತ್ವದ ಮೇಲೆ ಹೋರಾಟ ಮಾಡೋಣ. ಯೋಜನೆ ಅನುಷ್ಠಾನವಾಗುವುದರಿಂದ ತಮಿಳುನಾಡಿಗೆ ನಮಗಿಂತಲೂ ಹೆಚ್ಚಿನ ಅನುಕೂಲವಾಗಲಿದೆ. ನಮಗೆ 400 ಮೆ.ವ್ಯಾ. ವಿದ್ಯುತ್ ಉತ್ಪಾದನೆಗೆ ಅವಕಾಶ ಸಿಕ್ಕರೆ, ಅವರಿಗೆ ಇನ್ನೂ ಹೆಚ್ಚಿನ ಕುಡಿಯುವ ನೀರಿನ ಅನುಕೂಲವಾಗಲಿದೆ ಎಂದು ತಿಳಿಸಿದರು. ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ಎಲ್ಲಾ ಸಿದ್ಧತೆ ಮಾಡಿಕೊಳ್ಳಲಾಗಿದೆ.**

ಬೆಳಗಾವಿ: ಮಂಡ್ಯ, ಮೈಸೂರು, ರಾಜಧಾನಿ ಬೆಂಗಳೂರು ಸೇರಿದಂತೆ ಮತ್ತಿತರ ನಗರಗಳಿಗೆ ಕುಡಿಯುವ ನೀರು ಪೂರೈಸುವ ಮತ್ತು ವಿದ್ಯುತ್ ಉತ್ಪಾದನೆ ಮಾಡುವ ಮೇಕೆದಾಟು ಯೋಜನೆ ಅನುಷ್ಠಾನ ಮಾಡಲು ನಮ್ಮ ಸರ್ಕಾರ ಬದ್ಧವಿದೆ. ಇದಕ್ಕೆ ಕೇಂದ್ರ ಸರ್ಕಾರ ನಮ್ಮ ಜತೆ ಕೈ ಜೋಡಿಸಲಿ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿಧಾನ ಪರಿಷತ್ತಿನಲ್ಲಿ ಮನವಿ ಮಾಡಿದ್ದಾರೆ.

ಯೋಜನೆಯನ್ನು ನಮ್ಮ ನೆಲದಲ್ಲೇ ಆರಂಭಿಸಿದರೂ ಕೇಂದ್ರದ ಪರಿಸರ ಮತ್ತು ಅರಣ್ಯ ಇಲಾಖೆಯ ಅನುಮತಿ ಪಡೆಯಬೇಕು. ಈ ಇಲಾಖೆಗಳ ಒಪ್ಪಿಗೆ ಇಲ್ಲದೆ, ಯೋಜನೆ ಪ್ರಾರಂಭಿಸಲಾಗುವುದು. ಈ ಯೋಜನೆಯಿಂದ ಶಾಶ್ವತ ಪರಿಹಾರ ದೊರೆಯಲಿದೆ. ಇದರಿಂದಾಗಿ ಸಂಕಷ್ಟ ಪರಿಸ್ಥಿತಿಯೂ ನಿವಾರಣೆಯಾಗಲಿದೆ ಎಂದು ಅವರು ಹೇಳಿದರು. ರಾಜ್ಯದಲ್ಲಿ ಈ ಬಾರಿ ಬರಗಾಲ ಆವರಿಸಿದ್ದರೂ ರೈತರಿಗೆ ತೊಂದ–ರೆಯಾಗದಂತೆ ಅವರ ಬೆಳೆಗಳನ್ನು ರಕ್ಷಣೆ ಮಾಡಿದ್ದೇವೆ. ಒಂದು ಕಡೆ ಸಿಡಬ್ಲ್ಯು ಆರ್ಸಿ ಮತ್ತು ಸಿಡಬ್ಲ್ಯು ಎಂಎ ನಿರ್ದೇಶನಗಳನ್ನು ಪಾಲನೆ ಮಾಡಿದ್ದೇವೆ. ಕೆಲವು ಸಂದರ್ಭಗಳಲ್ಲಿ ಅರ್ಕಾವತಿ ಮತ್ತು ಹಾರಂಗಿಯ ಹೆಚ್ಚುವರಿ ನೀರನ್ನು ಬಳಸಿಕೊಂಡು ಬಿಳಿಗುಂಡ್ಲುವಿಗೆ ಎಷ್ಟು ನೀರು ಬಿಡಬೇಕಿತ್ತೋ ಅಷ್ಟು ನೀರನ್ನು ಬಿಟ್ಟಿದ್ದೇವೆ. ಪ್ರತಿ ವರ್ಷ ತಮಿಳುನಾಡಿಗೆ 177 ಟಿಎಂಸಿ ಅಡಿ ನೀರು ಹರಿಸಬೇಕು. ಎಲ್ಲಿಯೂ ಕೂಡ ರೈತರ ಹಿತವನ್ನು ಕಡೆಗಣಿಸಿಲ್ಲ.

ಕುಡಿಯುವ ನೀರು, ರೈತರ ಬೆಳೆಗಳ ರಕ್ಷಣೆ ಮತ್ತು ಜಾನುವಾರುಗಳಿಗೆ ಮೇವು ಒದಗಿಸುವುದು ನಮ್ಮ ಆದ್ಯತೆ–ಯಾಗಿತ್ತು. ಬರಗಾಲದ ಸಂದರ್ಭದಲ್ಲೂ ಪರಿಸ್ಥಿತಿಯನ್ನು ನಿಭಾಯಿಸಿದ್ದೇವೆ ಎಂದು ಸಮರ್ಥಿಸಿಕೊಂಡರು. ಮೇಕೆದಾಟು ಯೋಜನೆ ಸಂಬಂಧ ಕೆಳಹಂತದಲ್ಲೇ ಪರಿಹರಿಸಿಕೊಳ್ಳುವಂತೆ ಸುಪ್ರೀಂ ಕೋರ್ಟ್ ನಿರ್ದೇಶನ ನೀಡಿದೆ. ಹೀಗಾಗಿ ಪ್ರಧಾನಿ ಹಾಗೂ ಕೇಂದ್ರ ಜಲಶಕ್ತಿ ಸಚಿವರ ಬಳಿಗೆ ನಮ್ಮ ರಾಜ್ಯದ ಎಲ್ಲಾ ಪಕ್ಷಗಳ ಸಂಸದರನ್ನೊಳಗೊಂಡ ನಿಯೋಗವನ್ನುಕರೆದೊಯ್ಯಲು ಸಿದ್ಧವಿದೆ. ಇದಕ್ಕೆ ನೀವು(ಬಿಜೆಪಿ) ಸಹಕಾರ ಕೊಡಿ ಎಂದು ಶಿವಕುಮಾರ್ ಅವರು ಮನವಿ ಮಾಡಿದರು.

## ಕಲಾಪಕ್ಕೆ ಅಡ್ಡಿಪಡಿಸಿದ ಆರೋಪ

### ಲೋಕಸಭೆಯಿಂದ ಒಟ್ಟು 15 ಸಂಸದರು ಅಮಾನತು!




ನವದೆಹಲಿ: ಸಂಸತ್ ಕಲಾಪಕ್ಕೆ ಅಡ್ಡಿಪಡಿಸಿದ ಆರೋಪದ ಮೇಲೆ ಲೋಕಸಭೆಯಿಂದ ಒಟ್ಟು 15 ಸಂಸದರನ್ನು ಅಮಾನತುಗೊಳಿಸಲಾಗಿದೆ. ಚಳಿಗಾಲದ ಅಧಿವೇಶನ ಮುಕ್ತಾಯಗೊಳ್ಳುವವರೆಗೆ 15 ಸಂಸದರನ್ನು ಅಮಾನತುಗೊಳಿಸಲಾಗಿದೆ. ಲೋಕಸಭೆಯ 14 ಸಂಸದರು ರಾಜ್ಯಸಭೆಯ ಓರ್ವ ಸಂಸದನನ್ನು ಅಮಾನತುಗೊಳಿಸಲಾಗಿದೆ. ಸಂಸತ್ ನ ಭದ್ರತಾ ಉಲ್ಲಂಘನೆ ವಿಷಯವಾಗಿ ಈ ಸಂಸದರು ಕೋಲಾಹಲ ಉಂಟುಮಾಡಿ ಸುಗಮ ಕಲಾಪಕ್ಕೆ ಅಡ್ಡಿ ಉಂಟುಮಾಡಿದ್ದರು. ಅಶಿಸ್ತಿನ ನಡವಳಿಕೆಯ ಕಾರಣ ನೀಡಿ ಈ ಸಂಸದರನ್ನು ಸಸ್ಪೆಂಡ್ ಮಾಡಲಾಗಿದೆ.

ಕನಿಮೋಳಿ, ಮಾಣಿಕಂ ಟ್ಯಾಗೋರ್, ಪಿಆರ್ ನಟರಾಜನ್, ವಿಕೆ ಶ್ರೀಕಂಠಂ, ಬೇನಿ ಬಹನ್, ಕೆ ಸುಬ್ರಮಣ್ಯಂ, ಎಸ್‌ಆರ್ ಪ್ರತಿಬನ್, ಎಸ್ ವೆಂಕಟೇಶನ್, ಮೊಹಮ್ಮದ್ ಜಾವೇದ್, ಟಿಎನ್ ಪ್ರತಾಪನ್, ಹೈಬಿ ಈಡನ್, ಎಸ್ ಜೋತಿಮಣಿ, ರಮ್ಯಾ ಹರಿದಾಸ್ ಮತ್ತು ಡೀನ್ ಕುರಿಯಾಕೋಸ್ ಅಮಾನತುಗೊಂಡ ಸಂಸದರಾಗಿದ್ದಾರೆ.

ಡಿ.13 ರಂದು ಸಂದರ್ಶಕರ ಗ್ಯಾಲರಿಯಿಂದ ಲೋಕಸಭೆಯ ಸಭಾಂಗಣಕ್ಕೆ ಜಿಗಿದ ಸಾಗರ್ ಶರ್ಮಾ ಮತ್ತು ಮನೋರಂಜನ್ ಡಿ ಎಂಬ ಇಬ್ಬರು ವ್ಯಕ್ತಿಗಳಿಂದ ಉಂಟಾದ ಭದ್ರತಾ ಲೋಪವನ್ನು ವಿರೋಧಿಸಿ ಕಾಂಗ್ರೆಸ್ ನೇತೃತ್ವದ ಪ್ರತಿಪಕ್ಷಗಳು ಕೋಲಾಹಲ ಸೃಷ್ಟಿಸಿ ಪ್ರತಿಭಟಿಸಿದ್ದರಿಂದ ಗುರುವಾರ ಲೋಕಸಭೆ ಕಲಾಪಕ್ಕೆ ಅಡ್ಡಿಯಾಯಿತು.

## ಅರಣ್ಯ ಭೂಮಿ ಗಡಿ ಗುರುತಿಸಲು ಜಂಟಿ ಸರ್ವೆ



ಬೆಳಗಾವಿ: ಅರಣ್ಯ ಭೂಮಿ ಗಡಿ ಗುರುತಿಸಿ ನಿಖರ ನಕ್ಷೆ ಮಾಡುವ ಸಲುವಾಗಿ ಅರಣ್ಯ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳ ಜಂಟಿ ಸರ್ವೆ ಕೈಗೊಳ್ಳಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ವಿಧಾನಸಭೆಯಲ್ಲಿಂದು ಹೇಳಿದರು. ಪ್ರಶ್ನೋತ್ತರ ವೇಳೆಯಲ್ಲಿ ಮಾತನಾಡಿದ ಸಚಿವರು, ಕರ್ನಾಟಕ ಅರಣ್ಯ ನಿಯಮದ ಪ್ರಕಾರ ಜಿಲ್ಲಾ ಅರಣ್ಯ ಅಥವಾ ರಕ್ಷಿತ ಅರಣ್ಯ–ಕ್ಕೆ ಹೊಂದಿಕೊಂಡತೆ ಹಾಗೂ 100 ಮೀಟರ್ ವ್ಯಾಪ್ತಿಯಲ್ಲಿನ ಭೂಮಿ ಮಂಜೂರಾತಿ ಪೂರ್ವದಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಸಮ್ಮತಿ ಪಡೆಯುವುದು ಕಡ್ಡಾಯವಾಗಿದೆ. ಅಧಿಸೂಚಿತ ಹಾಗೂ ಡೀಮ್ಡ್ ಅರಣ್ಯ ಅರಣ್ಯ ಪ್ರದೇಶಗಳಿಗೆ ಸರ್ವೆ ನಂಬರ್ ಅನ್ವಯ ವಿವರವಾದ ಮಾಹಿತಿ ಇಲ್ಲದಂತಹ ಸಂದರ್ಭದಲ್ಲಿ ನಿರಾಕ್ಷೇಪಣ ಪತ್ರ ನೀಡಲು ಕಂದಾಯ ಇಲಾಖೆಯೊಂದಿಗೆ ಜಂಟಿ ಮೋಜಣಿ ಮಾಡಲಾಗುವುದು ಎಂದರು. ಆನೆಗಳ ನಿಯಂತ್ರಣಕ್ಕೆ ರೈಲ್ವೇ ಬ್ಯಾರಿಕೇಡ್: ರಾಜ್ಯದಲ್ಲಿ 6995 ಆನೆಗಳು ಇವೆ. ಒಟ್ಟು 7 ಆನೆ ಕಾರ್ಯಪಡೆಗಳು ಕಾರ್ಯಾಚರಣೆ ನಡೆಸುತ್ತಿವೆ. ಶೃಂಗೇರಿ ವಿಧಾನಸಭಾ ಕ್ಷೇತ್ರಕ್ಕೆ ಒಳಪಡುವ ಆಲ್ದಾರಾ ಶಾಖೆ–ಯ ಅರಣ್ಯ ಗಡಿ ಪ್ರದೇಶದಲ್ಲಿ ರೈಲ್ವೇ ಬ್ಯಾರಿಕೇಡ್ ನಿರ್ಮಾಣಕ್ಕೆ 2022–23ನೇ ಸಾಲಿನಲ್ಲಿ ರೂ.1.73 ಕೋಟಿ, 2023–24ರಲ್ಲಿ ರೂ.3.59 ಕೋಟಿ ಅನುದಾನ ನಿಗದಿಪಡಿಸಲಾಗಿದೆ. ಒಟ್ಟು 7.152 ಕಿ.ಮೀ ರೈಲ್ವೇ ಬ್ಯಾರಿಕೇಡ್ ನಿರ್ಮಾಣ ಮಾಡಬೇಕಿದೆ. ಇದರಲ್ಲಿ 1.215 ಕಿ.ಮೀ ಪೂರ್ಣಗೊಂಡಿದೆ. 2.337 ಕಿ.ಮೀ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ. 3.60 ಕಿ.ಮೀ ನಿರ್ಮಾಣ ಕಾಮಗಾರಿ ಬಾಕಿ ಉಳಿದಿದೆ. ಡಿಸೆಂಬರ್ 2024ರ ಅಂತ್ಯದೊಳಗೆ ಕಾಮಗಾರಿ ಪೂರ್ಣಗೊಳಿಸುವುದಾಗಿ ಸಚಿವರು ತಿಳಿಸಿದರು. ಮೈಸೂರು ಜಿಲ್ಲೆ ಹೆಗ್ಗದೇವನಕೋಟೆ ತಾಲ್ಲೂಕು ವ್ಯಾಪ್ತಿಯಲ್ಲಿ ಪ್ರಸಕ್ತ ವರ್ಷ 8 ಮಾನವ ಹಾಗೂ ವನ್ಯಪ್ರಾಣಿ ಸಂಘರ್ಷಗಳು ದಾಖಲಾಗಿವೆ. ಈ ಭಾಗದಲ್ಲಿ ಅರಣ್ಯ ಗಡಿ ಪ್ರದೇಶ ಗುರುತಿಸುವ ಕಾರ್ಯ ಪೂರ್ಣಗೊಂಡಿದೆ. ಸಂಘರ್ಷ ತಡೆಯಲು ಜಂಟಿ ಸರ್ವೇ ಕಾರ್ಯವನ್ನು ಸಹ ಕೈಗೊಳ್ಳಲಾಗುವುದು. ರಾಜ್ಯದಲ್ಲಿ ಒಟ್ಟು ರೂ.200 ಕೋಟಿ ವೆಚ್ಚದಲ್ಲಿ ಆನೆಗಳು ಜನವಸತಿ ಪ್ರದೇಶಕ್ಕೆ ಬರುವುದನ್ನು ತಡೆಯಲು 640 ಕಿ.ಮೀ. ರೈಲ್ವೆ ಬ್ಯಾರಿಕೇಡ್ ಅಳವಡಿಸುವ ಕಾರ್ಯ ಪ್ರಗತಿಯಲ್ಲಿದೆ. ಒಟ್ಟು 312 ಕಿ.ಮೀ. ಬ್ಯಾರಿಕೇಡ್ ಅಳವಡಿಕೆ ಕಾರ್ಯ ಪೂರ್ಣಗೊಂಡಿದೆ. ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ತಡೆಗಟ್ಟಲು ಮನೆ ಅರಣ್ಯದಂಚಿನಲ್ಲಿ ಸೌರಶಕ್ತಿ ಬೇಲಿ, ಆನೆ ತಡೆ ಕಂದಕ ನಿರ್ಮಾಣ ಮಾಡಿ ನಿರ್ವಹಿಸಲಾಗುತ್ತಿದೆ ಎಂದು ಸಚಿವರು ಸ್ಪಷ್ಟಪಡಿಸಿದರು.

## ಬಿಜೆಪಿ ಅವಧಿಯಲ್ಲೇ ಹೆಚ್ಚು ಅಪರಾಧ ಪ್ರಕರಣ



ವಿಧಾನ ಪರಿಷತ್: ರಾಜ್ಯದಲ್ಲಿ ಬಿಜೆಪಿ ಅಧಿಕಾರದಲ್ಲಿದ್ದ ಅವಧಿಯಲ್ಲೇ ಹೆಚ್ಚಿನ ಕೊಲೆ, ಅತ್ಯಾಚಾರ ಪ್ರಕರಣಗಳು ನಡೆದಿವೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದರು.

ಬಿಜೆಪಿಯ ಮುನಿರಾಜುಗೌಡ ಪ್ರಶ್ನೆಗೆ ಉತ್ತರಿಸಿದ ಅವರು, 2011–13ರಲ್ಲಿ ಆರ್. ಅಶೋಕ ಅವರು ಗೃಹ ಸಚಿವರಾಗಿದ್ದ ಅವಧಿಯಲ್ಲಿ 4,121 ಕೊಲೆ, 1,639 ಅತ್ಯಾಚಾರ, 234 ಪೋಕ್ಸೊ ಪ್ರಕರಣಗಳು ದಾಖಲಾಗಿದ್ದವು. ಬೊಮ್ಮಾಯಿ ಅವರು ಗೃಹ ಸಚಿವರಾಗಿದ್ದ ಅವಧಿಯಲ್ಲಿ 2,554 ಕೊಲೆ, 915 ಅತ್ಯಾಚಾರ, ಆರಗ ಜ್ಞಾನೇಂದ್ರ ಅವಧಿಯಲ್ಲಿ 2,412 ಕೊಲೆ, 949 ಅತ್ಯಾಚಾರ ಪ್ರಕರಣಗಳು ದಾಖಲಾಗಿದ್ದವು ಎಂದು ವಿವರಿಸಿ, ಅಂಕಿ–ಅಂಶಗಳ ದಾಖಲೆಯನ್ನು ಮಂಡಿಸಿದರು.

ಕಾಂಗ್ರೆಸ್ ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಆರು ತಿಂಗಳಲ್ಲಿ ಅಪರಾಧ ಪ್ರಕರಣಗಳ ಸಂಖ್ಯೆ ಕಡಿಮೆಯಾಗಿದೆ. ಕಾನೂನು ಸುವ್ಯವಸ್ಥೆ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಲಾಗಿದೆ. ಕೋಮು ಹಿಂಸೆಯ ನಾಲ್ಕು ಪ್ರಕರಣಗಳನ್ನು ದಾಖಲಿಸಿ, ಸಮಾಜದ ಶಾಂತಿ ಕಾಪಾಡಲು ಶ್ರಮಿಸಲಾಗಿದೆ. ಆದರೂ, ವಿರೋಧ ಪಕ್ಷಗಳು ಅನಗತ್ಯವಾಗಿ ಆರೋಪ ಮಾಡುತ್ತಿವೆ ಎಂದರು.

ಹೆಚ್ಚಿದ ಮದ್ಯದಂಗಡಿಗಳ ಸಂಖ್ಯೆ: 25 ವರ್ಷಗಳಿಂದ ಮದ್ಯದಂಗಡಿಗಳನ್ನು ತೆರೆಯಲು ಹೊಸ ಪರವಾನಗಿ ನೀಡದೇ ಇದ್ದರೂ ಮದ್ಯದಂಗಡಿಗಳ ಸಂಖ್ಯೆ 3,700ರಿಂದ 11 ಸಾವಿರ ತಲುಪಿದೆ. ಕಾನೂನು ಬಾಹಿರವಾಗಿ ಪರವಾನಗಿ ನೀಡಲಾಗಿದೆ ಎಂದು ಜೆಡಿಎಸ್‌ನ ಸೂರಜ್ ರೇವಣ್ಣ ದೂರಿದರು.

ಪರವಾನಗಿ ವಿತರಣೆಯಲ್ಲಿ ಲೋಪವಾಗಿದ್ದರೆ ಪರಿಶೀಲಿಸಿ, ಕ್ರಮ ಕೈಗೊಳ್ಳಲಾಗುವುದು ಎಂದು ಅಬಕಾರಿ ಸಚಿವ ಆರ್ಬಿ. ತಿಮ್ಮಾಪೂರ ಹೇಳಿದರು.

## ನಾಗರೀಕರ ಸುರಕ್ಷತೆಗಾಗಿ ಹೆಚ್ಚುವರಿ 2500 ಸಿಸಿ ಕ್ಯಾಮೆರಾ

ಬೆಳಗಾವಿ: ರಾಜಧಾನಿ ಬೆಂಗಳೂರಿನಲ್ಲಿ ನಾಗರೀಕರ ಸುರಕ್ಷತೆಗೆ ಹೆಚ್ಚುವರಿ 2500 ಸಿಸಿ ಕ್ಯಾಮೆರಾಗಳನ್ನು ಅಳವಡಿಕೆ ಮಾಡಲಾಗುತ್ತಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ವಿಧಾನ ಪರಿಷತ್ತಿಗೆ ತಿಳಿಸಿದರು. ಪ್ರಶ್ನೋತ್ತರ ವೇಳೆಯಲ್ಲಿ ಬಿಜೆಪಿ ಸದಸ್ಯೆ ಭಾರತಿ ಶೆಟ್ಟಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಈಗಾಗಲೇ ಬೆಂಗಳೂರು ವ್ಯಾಪ್ತಿಯಲ್ಲಿ 7500 ಸಿಸಿ ಕ್ಯಾಮೆರಾ ಅಳವಡಿಸಲಾಗಿದೆ. ಜತೆ–ಗೆ ಕಮಾಂಡರ್ ಸೆಂಟರ್ನಲ್ಲಿ ಇದರ ಕಾರ್ಯಾಚರಣೆಯನ್ನು ವೀಕ್ಷಣೆ ಮಾಡಲಾಗುತ್ತಿದೆ. ಇನ್ನೂ ಕೇಂದ್ರ ಸರ್ಕಾರದ ನಿರ್ಭಯಾ ಯೋಜನೆಯಡಿಯಲ್ಲಿ ಹೆಚ್ಚುವರಿಯಾಗಿ 2500 ಕ್ಯಾಮೆರಾಗಳನ್ನು ಅಳವಡಿಕೆ ಮಾಡಲಾಗುವುದು ಎಂದರು. ಕ್ಯಾಮೆರಾಗಳು ಹೆಚ್ಚು ಗುಣಮಟ್ಟದ್ದು ಆಗಿದ್ದು, ವ್ಯಕ್ತಿಗಳ ಕೈಯಲ್ಲಿರುವ ಗಡಿಯಾರದ ಸಮಯವನ್ನು ನೋಡಬಹುದಾಗಿದೆ. ಇನ್ನೂ, ಹೆಚ್ಚಿನ ಕ್ಯಾಮೆರಾಗಳನ್ನು ವಾಣಿಜ್ಯ ಕಟ್ಟಡ, ಪ್ರದೇಶ, ಶಾಲಾ ಕಾಲೇಜು, ಸರ್ಕಾರಿ ಕಟ್ಟಡ, ಬಸ್ ನಿಲ್ದಾಣಗಳಲ್ಲಿ ಅಳವಡಿಸಿ ವಿಶೇಷ ನಿಗಾ ಇರಿಸಲಾಗಿದೆ ಎಂದು ಅವರು ಹೇಳಿದರು.

## ಮತ್ತೊಬ್ಬ ಮಹಿಳೆ ಬಲಿಪಡೆದ ಕಿಲ್ಲರ್ ಬಿಎಂಟಿಸಿ

ಬೆಂಗಳೂರು: ಅತಿ ವೇಗವಾಗಿ ಹೋಗುತ್ತಿದ್ದ ಬಿಎಂಟಿಸಿ ಬಸ್ಸೊಂದು ಸ್ಕೂಟರ್ಗೆ ಡಿಕ್ಕಿ ಹೊಡೆದ ಪರಿಣಾಮ ಚಕ್ರಕ್ಕೆ ಸಿಲುಕಿ ಗೃಹಿಣಿ ಮೃತಪಟ್ಟಿರುವ ಘಟನೆ ಮಡಿವಾಳ ಸಂಚಾರಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.ಸಿಂಗಸಂದ್ರದ ನಿವಾಸಿ ಸೀಮಾ(22) ಮೃತಪಟ್ಟ ಗೃಹಿಣಿ. ಇವರ ಪತಿ ಗುರುಮೂರ್ತಿ ಹಾಗೂ ಒಂದೂವರೆ ವರ್ಷದ ಮಗು ಗಾನವಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ನಿನ್ನೆ ಸಂಜೆ 6.45ರ ಸುಮಾರಿನಲ್ಲಿ ಸಿಂಗಸಂದ್ರದಿಂದ ಗುರುಮೂರ್ತಿ ಅವರು ಪತ್ನಿ ಸೀಮಾ ಹಾಗೂ ಮಗುವನ್ನು ಕರೆದುಕೊಂಡು ಸ್ಕೂಟರ್ನಲ್ಲಿ ಪ್ರೇ ಕಬ್ಬಡಿ ನೋಡಲು ಹೋಗುತ್ತಿದ್ದರು.ಸಿಲ್ಕ್ಬೋರ್ಡ್ ಜಂಕ್ಷನ್ ಅಪ್ಪರ್ಯಾಂಪ್ ಬಳಿ ಅತಿ ವೇಗ ಹಾಗೂ ಅಜಾಗರೂಕತೆಯಿಂದ ಬಿಎಂಟಿಸಿ ಬಸ್ ಚಾಲನೆ ಮಾಡಿಕೊಂಡು ಬರುತ್ತಿದ್ದಾಗ ಸ್ಕೂಟರ್ಗೆ ಡಿಕ್ಕಿ ಹೊಡೆದಿದೆ.ಡಿಕ್ಕಿ ಹೊಡೆದ ರಭಸಕ್ಕೆ ಸೀಮಾ ಅವರು ಒಂದು ಕಡೆ ಬಿದ್ದಾಗ ಅವರ ಮೇಲೆಯೇ ಬಸ್ ಚಕ್ರ ಹರಿದ ಪರಿಣಾಮ ಸ್ಥಳದಲ್ಲೇ ದಾರುಣವಾಗಿ ಮೃತಪಟ್ಟಿದ್ದಾರೆ.

## ಕಾಂಗ್ರೆಸ್ ಸರ್ಕಾರದ ಐದನೇ ಗ್ಯಾರಂಟಿ 'ಯುವ ನಿಧಿ' ಯೋಜನೆ ಜ.1 ರಿಂದ ಜಾರಿ

ಬೆಂಗಳೂರು: ಪದವೀಧರರಿಗೆ 3 ಸಾವಿರ ರೂಪಾಯಿ ಮತ್ತು ಡಿಪ್ಲೊಮಾ ಮಾಡಿದ ನಿರುದ್ಯೋಗಿ ಯುವಕರಿಗೆ ಪ್ರತಿ ತಿಂಗಳು 1500 ಭತ್ಯೆ ನೀಡುವ ರಾಜ್ಯ ಕಾಂಗ್ರೆಸ್ ಸರ್ಕಾರದ ಐದನೇ ಗ್ಯಾರಂಟಿ 'ಯುವ ನಿಧಿ' ಯೋಜನೆ ಹೊಸ ವರ್ಷದಿಂದಲೇ ಜಾರಿಗೆ ಬರಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರ ಘೋಷಿಸಿದ್ದಾರೆ. ಈ ಮುಂಚೆ ಡಿಸೆಂಬರ್ 26 ರಿಂದ 'ಯುವ ನಿಧಿ' ನೋಂದಣಿ ಪ್ರಾರಂಭವಾಗಲಿದೆ ಎಂದು ಕೌಶಲ್ಯಾಭಿವೃದ್ಧಿ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಅವರು ಹೇಳಿದ್ದರು. ಇದೀಗ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಈ ಯೋಜನೆಯು ಜನವರಿ 1, 2024 ರಿಂದ ಜಾರಿಗೆ ಬರಲಿದೆ ಮತ್ತು ಅರ್ಜಿದಾರರು 'ಸೇವಾ ಸಿಂಧು' ಪೋರ್ಟಲ್‌ನಲ್ಲಿ ನೋಂದಾಯಿಸಿಕೊಳ್ಳಬಹುದು ಎಂದು ತಿಳಿಸಿದ್ದಾರೆ.

2022–23ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಪದವಿ ಪಡೆದು ಆರು ತಿಂಗಳು ಪೂರೈಸಿದವರು ಮತ್ತು ಉನ್ನತ ಶಿಕ್ಷಣ ಅಥವಾ ಯಾವುದೇ ಉದ್ಯೋಗಕ್ಕೆ ಸೇರದೇ ಇರುವವರು ಅರ್ಜಿ ಸಲ್ಲಿಸಲು ಅರ್ಹರು ಎಂದು ಮುಖ್ಯಮಂತ್ರಿಗಳು ಸಾಮಾಜಿಕ ಮಾಧ್ಯಮ 'ಎಕ್ಸ್' ನಲ್ಲಿ ಪೋಸ್ಟ್ ಮಾಡಿದ್ದಾರೆ. ಈ ಯೋಜನೆಯಡಿ ನಿರುದ್ಯೋಗಿ ಪದವೀಧರರಿಗೆ ಮಾಸಿಕ 3,000 ರೂ. ಮತ್ತು ಡಿಪ್ಲೊಮಾ ಮಾಡಿದ ನಿರುದ್ಯೋಗಿಗಳಿಗೆ 1,500 ರೂ. ನೀಡಲಾಗುತ್ತದೆ. ಉದ್ಯೋಗ ಸಿಗುವವರೆಗೆ ಅಥವಾ ಎರಡು ವರ್ಷ ಅವಧಿಯಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಈ ಹಣವನ್ನು ಫಲಾನುಭವಿಗಳ ಖಾತೆಗೆ ನೇರವಾಗಿ ವರ್ಗಾಯಿಸಲಾಗುತ್ತದೆ.

ಈ ವರ್ಷದ ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ಕಾಂಗ್ರೆಸ್ ಐದು ಗ್ಯಾರಂಟಿಗಳನ್ನು ಘೋಷಿಸಿತ್ತು ಮತ್ತು ಅದರಲ್ಲಿ 'ಯುವ ನಿಧಿ' ಕೂಡ ಒಂದಾಗಿದೆ.

## ಆಂಜನೇಯ ನಗರದ ಸರ್ಕಾರಿ ಶಾಲೆ ಉಳಿಸಲು ಆಗ್ರಹ

ಬೆಳಗಾವಿ : ಆಂಜನೇಯ ನಗರದ ಸರ್ಕಾರಿ ಶಾಲೆಯನ್ನು ಉಳಿಸಲು ಆಗ್ರಹ ಸರ್ಕಾರಿ ಶಾಲೆಗಳ ಹಣೆಬರಹವೇ ಇಷ್ಟು. ಶಾಲೆಗಳ ಅಭಿವೃದ್ಧಿ ಕುರಿತು ಯಾರಿಗೂ ಆಸಕ್ತಿ ಇರುವುದಿಲ್ಲ. ಇದು ಕೇವಲ ಒಂದು ಕ್ಷೇತ್ರ, ಒಂದು ಜಿಲ್ಲೆಗೆ ಸೀಮಿತವಾಗಿಲ್ಲ. ರಾಜ್ಯದ ಉದ್ದಗಲಕ್ಕೂ ಸರಕಾರಿ ಶಾಲೆಗಳೆಂದರೆ ನಿರಾಸಕ್ತಿ ತಾಳುತ್ತಾ ಬರಲಾಗಿದೆ.

ಬೆಳಗಾವಿಯಿಂದ ಚಾಮರಾಜನಗರದವರೆಗೆ ಇದೇ ಪರಿಸ್ಥಿತಿ. ಈ ರೀತಿ ಅಸಡ್ಡೆ ತೋರುತ್ತಾ ಹೋದರೆ ಭವಿಷ್ಯದಲ್ಲಿ ಸಕಾರಿ ಶಾಲೆಗಳೇ ಇಲ್ಲವಾಗುವ ಪರಿಸ್ಥಿತಿ ನಿರ್ಮಾಣವಾದರೂ ಅಚ್ಚರಿಯೇನಿಲ್ಲ. ಇಂತಹ ಅನಾದರಕ್ಕೊಳಗಾದ ಒಂದು ಶಾಲೆಯ ಚಿತ್ರಣ ಇಲ್ಲಿದೆ. ಬೆಳಗಾವಿಯ ಆಂಜನೇಯ ನಗರದ

ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ದುಸ್ಥಿತಿ ಹೇಗಿದೆ ಎಂದರೆ ಕೊಟ್ಟಿಗೆ ಮನೆಗಿಂತಲೂ ಕಡೆಯಾಗಿದೆ.

ಈ ಶಾಲೆ ಬೆಳಗಾವಿ ಉತ್ತರ ಮತಕ್ಷೇತ್ರದ ವ್ಯಾಪ್ತಿಗೆ ಒಳಪಡುತ್ತದೆ. ಸ್ಥಳೀಯ ಶಾಸಕರಿಗೆ ಮಾಹಿತಿ ಇದೆಯೋ ಇಲ್ಲವೋ ತಿಳಿದಿಲ್ಲ. ದಶಕಗಳ ಹಳೆಯ ಶಾಲೆ ಇದು. ಸರಿ ಸುಮಾರು ಒಂದು ಎಕರೆಯಷ್ಟು ವಿಶಾಲವಾದ ಪ್ರದೇಶ ಇದೆ. ಐದಾರು ವರ್ಷಗಳ ಹಿಂದೆ 65–70 ಮಕ್ಕಳಿದ್ದು ಇಂದು ಕೇವಲ 27ಮಕ್ಕಳು ಮಾತ್ರ ಉಳಿದುಕೊಂಡಿದ್ದಾರೆ. ಆಗಲೇ ಹೇಳಿದ ಹಾಗೆ ಇದು ದನದ ಕೊಟ್ಟಿಗೆಗಿಂತಲೂ ಕಡೆಯಾಗಿದೆ.



ಶಾಲಾ ಕೊಠಡಿಗಳು ಸುಣ್ಣ ಬಣ್ಣ ಕಂಡು ಅನೇಕ ವರ್ಷಗಳೇ ಸಂದಿವೆ. ಹೇಳಿಕೇಳಿ ಬಡ ಮಕ್ಕಳು ಕಲಿಯುವ ಶಾಲೆ. ಯಾರಿಗೂ ಆಸಕ್ತಿ ಇಲ್ಲದಿರುವುದು ವಿಷಾದನೀಯ. ಇನ್ನು ಇಲ್ಲಿನ ಶೌಚಾಲಯಗಳ ಪರಿಸ್ಥಿತಿ ನೋಡಿದರೆ ಅಸಹ್ಯ ಉಂಟಾಗುತ್ತದೆ. ಬಳಸಲು ಸಾಧ್ಯವೇ ಇಲ್ಲವಾದ ಪರಿಸ್ಥಿತಿಯಲ್ಲಿವೆ. ಒಮ್ಮೆ ಈ ಶಾಲೆಗಳ ಪರಿಸ್ಥಿತಿ ನೋಡಿದರೆ ಕಲಿಯಲು ಆಸಕ್ತಿ ಇರುವ ಮಕ್ಕಳೂ ಓಡಿ ಹೋಗುವುದರಲಿ ಅನುಮಾನವಿಲ್ಲ. ಈ ಶಾಲೆಯ ಸಮೀಪದ ನಿವಾಸಿಯಗಿರುವ ಸುಜಿತ್ ಅವರು ಈ ಶಾಲೆ ಕುರಿತು ವಿಶೇಷ ಕಾಳಜಿವಹಿಸಿದ್ದಾರೆ. ಅವರು, ಅವರ ಸ್ನೇಹಿತರು, ಮತ್ತು ಸ್ಥಳೀಯ ನಿವಾಸಿಗಳು ಸೇರಿಕೊಂಡು ಶಾಲೆಯ ಸುತ್ತ 70–80 ಸಸಿಗಳನ್ನು ನೆಟ್ಟಿದ್ದಾರೆ. ಶಾಲೆಯ ಅಭಿವೃದ್ಧಿಗೆ ಸಹಕರಿಸುವಂತೆ ಶಾಲೆಯ ಮುಖ್ಯೋಪಧ್ಯಾಯಿನಿ ಅವರಿಗೆ ತಿಳಿಸಿದರೆ ಅವರು ನಿರಾಸಕ್ತಿ ತೋರುತ್ತಾರೆ ಎಂದು ತಿಳಿದು ಬಂದಿದೆ.

ಈ ಶಾಲೆಗೆ ಬಿಡುಗಡೆ ಆಗಿರುವ ಅನುದಾನ ಎಷ್ಟು ಎಲ್ಲಿ

ಖರ್ಚು ಮಾಡಲಾಗಿದೆ ಎಂಬ ಮಾಹಿತಿಯನ್ನು ಗುಟ್ಟಾಗಿ ಇಡಲಾಗಿದೆ. ಏಕೆ ಎಂದು ತಿಳಿಯುತ್ತಿಲ್ಲ.



**ಶಾಸಕರೇ ಇತ್ತ ಗಮನಹರಿಸಿ:** ಬೆಳಗಾವಿ ಉತ್ತರದ ಆಸಿಫ್ ಸೇಠ್ ಅವರು ಜನಾನುರಾಗಿ ಶಾಸಕರು. ಸದಾ ಜನಸಾಮಾನ್ಯರ ಸಮಸ್ಯೆಗಳನ್ನು ಬಗೆಹರಿಸಲು ತುದಿಗಾಲಲ್ಲಿ ನಿಂತಿರುತ್ತಾರೆ. ಅವರು ದಯಮಾಡಿ ಇತ್ತ ಗಮನಹರಿಸಿ ಈ ಶಾಲೆಯನ್ನು ಉಳಿಸಬೇಕು. ಯಾವುದೇ ಕಾರಣಕ್ಕೂ ಈ ಶಾಲೆಯನ್ನು ಮುಚ್ಚಲು ಅವಕಾಶ ನೀಡಬಾರದು. ಕೆಲವು ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿದರೆ ಈ ಶಾಲೆಯ ದಾಖಲಾತಿ ಹೆಚ್ಚಲಿದೆ. ಇಲ್ಲವಾದಲ್ಲಿ ಈ ಜಾಗ ಭೂಗಳ್ಳರ ಪಾಲಾಗುವುದರಲ್ಲಿ ಸಂಶಯವಿಲ್ಲ. ಉಳ್ಳವರು ಕಾನ್ವೆಂಟ್ ಗಳಿಗೆ ತಮ್ಮ ಮಕ್ಕಳನ್ನು ಕಳುಹಿಸುತ್ತಾರೆ. ಬಡವರ ಪಾಲಿಗೆ ಉಳಿದಿರುವ ಈ ಶಾಲೆ ಶಾಶ್ವತವಾಗಿ ಬಾಗಿಲು ಹಾಕಿದರೆ ಮಕ್ಕಳು ಅನಕ್ಷರಸ್ಥರಾಗಿ ಉಳಿಯುತ್ತಾರೆ. ಶಾಸಕರೇ ನಿಮ್ಮ ಕ್ಷೇತ್ರದ ಮಕ್ಕಳು ಅಕ್ಷರ ಜ್ಞಾನ ಇಲ್ಲದೆ ಬದುಕಬೇಕೇ ನೀವೇ ನಿರ್ಧರಿಸಿ.

ಇಷ್ಟೊಂದು ವಿಶಾಲವಾದ ಪ್ರದೇಶ ಖಾಸಗಿ ಶಾಲೆಗಳಿಗೂ ಇಲ್ಲ. ಇರುವ ಸೌಲಭ್ಯಗಳನ್ನು ಬಳಸಿಕೊಳ್ಳಲು ಆಸಕ್ತಿ ಇರುವುದಿಲ್ಲ.



ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಇದಕ್ಕಿಂತ ಮಹತ್ವದ ಕೆಲಸ ಇದೆಯೇ? ಈ ಶಾಲೆಯ ಪರಿಸ್ಥಿತಿ ಅವರ ಗಮನಕ್ಕೆ ಬಂದಿಲ್ಲವೇ? ಬಂದಿದ್ದರೂ ಅವರು ನಿರ್ಲಕ್ಷ್ಯ ತಾಳಿರುವುದು ಏಕೆ ಎಂದು ಸ್ಥಳೀಯರು ಪ್ರಶ್ನಿಸುತ್ತಾರೆ. ಸ್ಥಳೀಯ ಪಾಲಿಕೆ ಸದಸ್ಯರ ಜವಬ್ಧಾರಿಯೂ ಇದೆ. ಅವರೂ ಈ ಶಾಲೆಯ ಪುನರುತ್ಥಾನಕ್ಕೆ ಶ್ರಮ ಹಾಕಬೇಕು. ಶಾಸಕರು, ಶಿಕ್ಷಣ ಇಲಾಖೆಗೆ ಪತ್ರ ಬರೆಯುವ ಮೂಲಕ ಶಾಲೆಯನ್ನು ಉಳಿಸುವ

ಪ್ರಯತ್ನ ಮಾಡಬೇಕು. ಸ್ಥಳೀಯ ನಿವಾಸಿಗಳು ಶಾಸಕರನ್ನು ಭೇಟಿ ಮಾಡಿ ಶಾಲೆಯ ಉಳಿವಿಗೆ ಮನವಿ ಸಲ್ಲಿಸಲು ನಿರ್ಧರಿಸಿದ್ದಾರೆ ಎಂದು ತಿಳಿದು ಬಂದಿದೆ. ಯಾವುದೇ ಲಾಭ ಇಲ್ಲದಿದ್ದರೂ ಅವರು ಈ ಕೆಲಸಕ್ಕೆ ಮುಂದಾಗಿರುವುದು ಶ್ಲಾಘನೀಯ. ಹಾಗೆಯೇ ಶಾಸಕರು ಮತ್ತು ಸಕಾರಿ ಅಧಿಕಾರಿಗಳು ತಮ್ಮ ಜವಬ್ಧಾರಿಯನ್ನು ನಿರ್ವಹಿಸಿದರೆ ಕನ್ನಡ ಶಾಲೆ ಉಳಿಯಲಿದೆ. ಕನ್ನಡದ ಉಳಿವು ಎಂದರೆ ಭಾಷಣ ಮಾಡುವುದಲ್ಲ. ಕನ್ನಡ ಶಾಲೆಗಳನ್ನು ಉಳಿಸುವುದು ಮುಖ್ಯ. ಆಗ ಮಾತ್ರ ಕನ್ನಡ ಭಾಷೆ ಮತ್ತು ಸಂಸ್ಕೃತಿ ಉಳಿಯುತ್ತದೆ.

**ಸ್ಥಳಿಯರು**

## ಧನಗರವಾಡಿ ವಸತಿ ಪ್ರದೇಶಕ್ಕೆ ಸೌರ ಶಕ್ತಿ ಮೂಲಕ ವಿದ್ಯುತ್ ಸಂಪರ್ಕ

# ಗ್ರಾಮಕ್ಕೆ ಮೂಲಭೂತ ಸೌಕರ್ಯ ಕಲ್ಪಿಸಲು ಸಚಿವೆ ಲಕ್ಷ್ಮೀ ಹೆಬ್ಬಾಳಕರ ಭರವಸೆ




ಬೆಳಗಾವಿ: ಧಾಮನೆಯ ಎಸ್. ಬೈಲೂರು ಗ್ರಾಮದ ಧನಗರವಾಡಿ ವಸತಿ ಪ್ರದೇಶಕ್ಕೆ ಸುಮಾರು 50 ವರ್ಷಗಳಿಂದ ವಿದ್ಯುತ್ ಸಂಪರ್ಕ ಕಲ್ಪಿಸಲು ಜನರಿಂದ ಬೇಡಿಕೆಯಿದ್ದು, ನಿಮ್ಮೆಲ್ಲರ ಕನಸು ಈಗ ಈಡೇರಿದೆ. ಮುಂದಿನ ದಿನಗಳಲ್ಲಿ ರಸ್ತೆ, ಶುದ್ಧ ಕುಡಿಯುವ ನೀರಿನ ಸಂಪರ್ಕ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುವುದು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅವರು ತಿಳಿಸಿದರು.

ಇಂಧನ ಇಲಾಖೆಯ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ ವತಿಯಿಂದ ಬೆಳಗಾವಿ ತಾಲೂಕಿನ ಧಾಮನೆ ಎಸ್. ಬೈಲೂರು ಗ್ರಾಮದ ಧನಗರವಾಡಿ ವಸತಿ ಪ್ರದೇಶಕ್ಕೆ ಸೌರ ಮತ್ತು ಪವನ (ಹೈಬ್ರಿಡ್) ವ್ಯವಸ್ಥೆ ಮೂಲಕ ವಿದ್ಯುದ್ದೀಕರಣ ಉದ್ಘಾಟಿಸಿ ಅವರು ಮಾತನಾಡಿದರು. ಸರ್ಕಾರದ ವಿವಿಧ ಯೋಜನೆಗಳನ್ನು ಗ್ರಾಮಕ್ಕೆ ತಲುಪಿಸುವ ಜವಾಬ್ದಾರಿ ನನ್ನದು. ಗೃಹ ಲಕ್ಷ್ಮೀ ಯೋಜನೆಯಡಿ ಈಗಾಗಲೇ ಪ್ರತಿ ಕುಟುಂಬದ ಯಜಮಾನಿಗೆ ಪ್ರತಿ ತಿಂಗಳ ತಲಾ 2 ಸಾವಿರ ರೂಪಾಯಿ ನೇರವಾಗಿ ಅವರ ಬ್ಯಾಂಕ್ ಖಾತೆಗೆ ವರ್ಗಾವಣೆ ಮಾಡಲಾಗುತ್ತಿದೆ ಎಂದು ಹೇಳಿದರು.

ಮಹಾರಾಷ್ಟ್ರ ಗಡಿ ಭಾಗದ ಸುಮಾರು 5 ಹಳ್ಳಿಗಳು ಇಲ್ಲಿವೆ. ಎಲ್ಲಾ ಗ್ರಾಮಗಳಿಗೂ ಮೂಲಭೂತ ಸೌಕರ್ಯಗಳ ಅಗತ್ಯವಿದೆ. ಈಗಾಗಲೇ ಈ ಕುರಿತು ಚರ್ಚಿಸಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಅಗತ್ಯ ಸೌಕರ್ಯಗಳನ್ನು ಕಲ್ಪಿಸಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರು ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅವರು ಭರವಸೆ ನೀಡಿದರು. ಸ್ಥಳೀಯ ಶಾಸಕರ ನಾಯಕತ್ವದಲ್ಲಿ ಇಂದು ನಿಮ್ಮ ಗ್ರಾಮದ ಪ್ರತಿ ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ. ಇಂತಹ ಪುಟ್ಟ ಗ್ರಾಮಗಳ ಅಭಿವೃದ್ಧಿಗೆ ಹಾಗೂ ಜನರಿಗೆ ಅನುಕೂಲವಾಗುವ ಯೋಜನೆಗಳನ್ನು ತಲುಪಿಸುವುದು ಸರ್ಕಾರದ ಮುಖ್ಯ ಉದ್ದೇಶವಾಗಿದೆ ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ಅವರು ತಿಳಿಸಿದರು.

ಈ ಭಾಗದ ಶಾಸಕರು ಹಗಲು ರಾತ್ರಿ ನಿರಂತರ ಶ್ರಮಿಸುವುದರ ಮೂಲಕ ಜನರಿಗೆ ಉತ್ತಮ ಸೇವೆ ಸಲ್ಲಿಸುತ್ತಿದ್ದಾರೆ.

ಅದಲ್ಲದೇ ಸರ್ಕಾರ ಕೂಡ ಜನರ ಕಷ್ಟಕ್ಕೆ ನಿರಂತರ ಸ್ಪಂದಿಸುತ್ತಿದೆ.

ಈಗ ತ್ವರಿತವಾಗಿ ಸೌರ ಶಕ್ತಿಯ ಮೂಲಕ ಗ್ರಾಮದ ಸುಮಾರು 22 ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ. ಮುಂದಿನ ದಿನಗಳಲ್ಲಿ ಗ್ರಾಮಕ್ಕೆ ಖಾಯಂ ವಿದ್ಯುತ್ ಸಂಪರ್ಕ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ಅವರು ಭರವಸೆ ನೀಡಿದರು. ಇದಕ್ಕೂ ಮುಂಚೆ ಇಂಧನ ಸಚಿವ ಕೆ.ಜೆ. ಜಾರ್ಜ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರು ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅವರು ಸಾಂಕೇತಿಕವಾಗಿ ಮನೆಯಲ್ಲಿ ವಿದ್ಯುತ್ ದೀಪ ಬೆಳಗಿಸುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಇಂಧನ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಗೌರವ ಗುಪ್ತಾ, ಧಾಮನೆ ಎಸ್. ಬೈಲೂರು ಗ್ರಾಮದ ಅಧ್ಯಕ್ಷರು, ಉಪಾಧ್ಯಕ್ಷರು, ಹೆಸ್ಕಾಂ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು ಹಾಗೂ ಗ್ರಾಮದ ಜನರು ಶಾಲಾ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಸಮುದ್ರ ಗ್ರಾಮದಲ್ಲಿ ಪರಿಸರ, ರೈತರ ಸುರಕ್ಷಾ ದಿನದ ಅಭಿಯಾನ



ಬಳ್ಳಾರಿ: ತಾಲ್ಲೂಕಿನ ಸೋಮಸಮುದ್ರ ಗ್ರಾಮದಲ್ಲಿ ಬಹುರಾಷ್ಟ್ರೀಯ ಕೀಟನಾಶಕಗಳ ಸಂಸ್ಥೆ, ವಿಲ್ಲೋವುಡ್ ಕೆಮಿಕಲ್ಸ್ ಲಿಮಿಟೆಡ್ ನ ವತಿಯಿಂದ ಮಂಗಳವಾರದಂದು ಪರಿಸರ ಮತ್ತು ರೈತರ ಸುರಕ್ಷಾ ದಿನ ಅಭಿಯಾನವನ್ನು ಹಮ್ಮಿಕೊಳ್ಳಲಾಗಿತ್ತು. ಕೀಟನಾಶಕಗಳ ಉಪಯುಕ್ತ ಬಳಕೆ ಮತ್ತು ಸುರಕ್ಷಿತವಾಗಿ ಬಳಸುವ ವಿಧಾನಗಳು, ಅಧಿಕೃತ ಮಾರಾಟಗಾರರಿಂದ ಖರೀದಿಸುವುದು ಮತ್ತು ರಶೀದಿಯನ್ನು ಪಡೆಯುವುದು. 9 ಸುರಕ್ಷತಾ ನಿಯಮಗಳು ಮತ್ತು ಸುರಕ್ಷತೆ ಬಳಸದಿದ್ದಲ್ಲಿ ಆಗುವ ದುಷ್ಪರಿಣಾಮಗಳನ್ನು ರೈತರಿಗೆ ಮನ ಮುಟ್ಟುವಂತೆ ತಿಳಿಸಿದರು. ಈ ಕಾರ್ಯಕ್ರಮದಲ್ಲಿ ರೀಜನಲ್ ಮ್ಯಾನೇಜರ್ ವೀರೇಂದ್ರಕುಮಾರ್ , ಏರಿಯಾ ಮ್ಯಾನೇಜರ್ ಸಂಜಯ್ ರೈತರಿಗೆ ಸಲಹೆ ಸೂಚನೆಗಳು ಕೊಟ್ಟರು.ಈ ಸಂದರ್ಭದಲ್ಲಿ ಗ್ರಾಮದ ರೈತರು, ಗ್ರಾಮಸ್ಥರು, ಯುವಕರು ಭಾಗವಹಿಸಿದ್ದರು.

## 'ಕಬ್ಬಿಗೆ 25 ಸಾವಿರ, ದ್ರಾಕ್ಷಿಗೆ 50 ಸಾವಿರ ಪರಿಹಾರ ನೀಡಿ'



ಬೆಳಗಾವಿ: 'ಬರದಿಂದ ತತ್ತರಿಸಿದ ಕಬ್ಬು ಬೆಳೆಗಾರರಿಗೆ ಎಕರೆಗೆ 25 ಸಾವಿರ, ದ್ರಾಕ್ಷಿ ಬೆಳೆಗಾರರಿಗೆ 50 ಸಾವಿರ ಪರಿಹಾರ ನೀಡಬೇಕು' ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹಿಸಿದರು. ನಗರದಲ್ಲಿ ಬುಧವಾರ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಆಯೋಜಿಸಿದ್ದ ಬೃಹತ್ ಪ್ರತಿಭಟನಾ ಸಮಾವೇಶದಲ್ಲಿ ಮಾತನಾಡಿದ ಅವರು, 'ರೈತರು ಸಂಕಷ್ಟದಲ್ಲಿದ್ದಾರೆ. ಬ್ಯಾಂಕ್ ಅಧಿಕಾರಿಗಳು ಸಾಲ ವಸೂಲಿಗೆ ಅವರ ಮನೆಗೆ ಹೋಗದಂತೆ ಸರ್ಕಾರ ಎಚ್ಚರಿಕೆ ವಹಿಸಬೇಕು' ಎಂದರು. '14 ಬಜೆಟ್ ಮಂಡನೆ ಮಾಡಿದ ಸಿದ್ದರಾಮಯ್ಯ ಅವರ ಮೇಲೆ ರೈತರು ನಂಬಿಕೆ ಇಟ್ಟಿದ್ದರು. ಹಿಂದೆ ಬಾದಾಮಿಯಲ್ಲಿ ಅವರನ್ನು ಗೆಲ್ಲಿಸಿ ಆಶ್ರಯ ನೀಡಿದ್ದರು. ಆದರೆ, ಇದೇ ಉತ್ತರ ಕರ್ನಾಟಕವನ್ನು ಸಿದ್ದರಾಮಯ್ಯ ನಿರ್ಲಕ್ಷ್ಯ ಮಾಡಿದ್ದಾರೆ. ಈ ಸರ್ಕಾರಕ್ಕೆ ರೈತರ ಮೂಲಕವೇ ಚಾಟಿ ಬೀಸುತ್ತೇವೆ. ಮುಂದಿನ ಲೋಕಸಭೆ ಚುನಾವಣೆಯಲ್ಲಿ ಎಲ್ಲ 28 ಕ್ಷೇತ್ರಗಲ್ಲಿ ಗೆದ್ದು ಇವರಿಗೆ ಉತ್ತರ ಕೊಡಬೇಕು' ಎಂದರು. ವಿಧಾನ ಪರಿಷತ್ ಸದಸ್ಯ ಎನ್. ರವಿಕುಮಾರ್ ಮಾತನಾಡಿ, 'ಸದ್ಯ ಕೇಂದ್ರವು ನೀಡುವ 5 ಕೆ.ಜಿ ಅಕ್ಕಿಯನ್ನೇ ಸಿದ್ದರಾಮಯ್ಯ ಉಚಿತ ಎಂದು ಕೊಡುತ್ತಿದ್ದಾರೆ.

ರಾಜ್ಯ ಸರ್ಕಾರದಿಂದ ಒಂದು ಹಿಡಿ ಅಕ್ಕಿ ಕೂಡ ಕೊಡುತ್ತಿಲ್ಲ' ಎಂದರು.

ಮುಖಂಡ ಬಿ.ಶ್ರೀರಾಮುಲು ಮಾತನಾಡಿ, 'ಕಾಂಗ್ರೆಸ್‌ನ ಬಿಬಿಎಂಪಿ ಸದಸ್ಯನ ಮನೆಯಲ್ಲಿ ನೂರಾರು ಕೋಟಿ ಅಕ್ರಮ ಹಣ ಪತ್ತೆಯಾಗಿದೆ. ಒರಿಸ್ಸಾದ ಸಂಸದನ ಮನೆಯಲ್ಲಿ ಲೆಕ್ಕಕ್ಕೇ ಸಿಗದಷ್ಟು ಹಣ ಸಿಕ್ಕಿದೆ. ಈ ಪ್ರಕರಣಗಳನ್ನು ಸಿಬಿಐಗೆ ವಹಿಸಬೇಕು' ಎಂದರು. 'ಒಂದು ಸಮುದಾಯವನ್ನು ಮೆಚ್ಚಿಸುವ ಕಾಂಗ್ರೆಸ್ ಗುಣ ಗೊತ್ತಾಗಿದೆ. ಹೀಗಾಗಿ, ಹಿಂದುಳಿದವರು ಪರಿಶಿಷ್ಟರು ಕಾಂಗ್ರೆಸ್‌ನಿಂದ ದೂರವಾಗಿದ್ದಾರೆ. ಇದರ ಪರಿಣಾಮ ಕೂಡಲೇ ಅವರಿಗೆ ಸಿಗಲಿದೆ' ಎಂದರು.

ಬಿಜೆಪಿ ಸಂಸದೀಯ ಪಕ್ಷದ ಸದಸ್ಯ ಬಿ.ಎಸ್.ಯಡಿಯೂರಪ್ಪ, ವಿಪಕ್ಷ ನಾಯಕ ಆರ್.ಅಶೋಕ, ಶಾಸಕರಾದ ಶಶಿಕಲಾ ಜೊಲ್ಲೆ, ವಿಠ್ಠಲ ಹಲಗೇಕರ, ದುರ್ಯೋಧನ ಐಹೊಳೆ, ನಿಖಿಲ್ ಕತ್ತಿ, ಬಾಲಚಂದ್ರ ಜಾರಕಿಹೊಳಿ, ಚಂದ್ರಕಾಂತ ಬೆಲ್ಲದ, ಸಿ.ಸಿ.ಪಾಟೀಲ, ಮುಖಂಡರಾದ ಗೋವಿಂದ ಕಾರಜೋಳ, ರಮೇಶ ಕತ್ತಿ, ಕೆ.ಎಸ್.ಈಶ್ವರಪ್ಪ, ಮಹಾಂತೇಶ ಕವಟಗಿಮಠ ಇದ್ದರು.

## ಸಂಗೊಳ್ಳಿರಾಯಣ್ಣ ಸೈನಿಕ ಶಾಲೆ, ರಾಕ್ ಗಾರ್ಡನ್‌ಗೆ ಸಚಿವ ತಂಗಡಗಿ ಭೇಟಿ



ಬೆಳಗಾವಿ: ಹಿಂದುಳಿದ ಕಲ್ಯಾಣ ಇಲಾಖೆ ವ್ಯಾಪ್ತಿಯಡಿ ಬರುವ ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನಲ್ಲಿರುವ ಕ್ರಾಂತಿವೀರ ಸಂಗೊಳ್ಳಿರಾಯಣ್ಣ ಸೈನಿಕ ಶಾಲೆಗೆ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಗುರುವಾರ ಸ್ಥಳೀಯ ಶಾಸಕ ಮಹಾಂತೇಶ್ ಕೌಜಲಗಿ ಹಾಗೂ ಅಧಿಕಾರಿಗಳೊಂದಿಗೆ ಸೈನಿಕ ಶಾಲೆಗೆ ಭೇಟಿ ನೀಡಿದ ಸಚಿವರು ಶಾಲೆಯಲ್ಲಿನ ಮೂಲಸೌಲಭ್ಯ ಹಾಗೂ ಗುಣಮಟ್ಟದ ಶಿಕ್ಷಣದ ಬಗ್ಗೆ ಮಾಹಿತಿ ಪಡೆದರು. ಈ ವೇಳೆ ಸಚಿವರು ಶಾಲೆಯ ಭೋಜನಾಲಯ, ಗ್ರಂಥಾಲಯ, ಶಿಕ್ಷಕರ ವಸತಿ ಗೃಹ, ಆಡಿಟೋರಿಯಂ ಹಾಗೂ ಕೆಲಸಗಾರರು ಉಳಿದುಕೊಳ್ಳಲು ಹೈಟೆಕ್ ವಸತಿ ಗೃಹ, 30ಎಕರೆ ವಿಸ್ತೀರ್ಣದಲ್ಲಿ ನಿರ್ಮಿಸಿರುವ ಬೃಹತ್ ಒಳಾಂಗಣ ಮತ್ತು ಹೊರಾಂಗಣದಲ್ಲಿ ಬರುವ ಈಜುಕೊಳ, ಹಾರ್ಸ್ ರೈಡಿಂಗ್, ಹಾಕಿ, ಕಬಡ್ಡಿ, ವಾಲಿಬಾಲ್ ಕೋರ್ಟ್ ಗೆ ಭೇಟಿ ನೀಡಿ ಅಲ್ಲಿನ ವ್ಯವಸ್ಥೆ ಬಗ್ಗೆ ಪರಿಶೀಲಿಸಿದರು.

6ನೇ ತರಗತಿಯಿಂದ 12ನೇ ತರಗತಿವರೆಗೆ ಶಾಲೆಯಲ್ಲಿ ವಿದ್ಯಾಭ್ಯಾಸಕ್ಕೆ ಅವಕಾಶವಿದ್ದು, ಕೇಂದ್ರ ರಕ್ಷಣಾ ಇಲಾಖೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಪ್ರವೇಶ ಪರೀಕ್ಷೆ ನಡೆಸುತ್ತದೆ. ಮೆರಿಟ್ ಆಧಾರದ ಮೇಲೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗುತ್ತದೆ. ಇಲ್ಲಿನ ಶಿಕ್ಷಕರಿಗೆ ಮೈಸೂರಿನಲ್ಲಿರುವ ರಿಜೀನಲ್ ಕಾಲೇಜ್ ಆಫ್ ಎಜುಕೇಷನ್ ಸಂಸ್ಥೆಯಿಂದ ವಿಶೇಷ ತರಬೇತಿ ಕೊಡಿಸಲಾಗುತ್ತದೆ ಎಂದು ಇಲಾಖಾ ಕಾರ್ಯದರ್ಶಿ ತುಳಸಿ ಮದ್ದಿನೇನಿ ಅವರು ಸಚಿವರಿಗೆ ವಿವರಿಸಿದರು. ಬಳಿಕ ಮಾತನಾಡಿದ ಸಚಿವರು, ಗುಣಮಟ್ಟದ ಶಿಕ್ಷಣ ಮುಖ್ಯ. ಶಾಲೆಯಲ್ಲಿ ಯಾವುದೇ ಮೂಲಸೌಲಭ್ಯಕ್ಕೆ ಕೊರತೆಯಾಗದಂತೆ ಕ್ರಮವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಅಕ್ಷರದ ಜತೆಗೆ ಶಿಸ್ತು, ಕಠಿನ ಶ್ರಮ, ಏಕತೆ, ದೇಶಾಭಿಮಾನದ ಪಾಠ ಮಾಡಲಾಗುತ್ತದೆ. ಹಲವು ಸಮರ ಕಲೆಗಳನ್ನು ಶಾಲಾ ಹಂತದಲ್ಲಿಯೇ ಕರಗತ ಮಾಡಲಾಗುತ್ತದೆ. ಈಜು, ಶೂಟಿಂಗ್ ತರಬೇತಿ ಸೈನಿಕ ಶಾಲೆಯಲ್ಲಿ ಪಠ್ಯದ ಜತೆಗೆ ಪಠ್ಯೇತರ ಚಟುವಟಿಕೆಯಲ್ಲೂ ವಿದ್ಯಾರ್ಥಿಗಳನ್ನು ದೈಹಿಕವಾಗಿ, ಮಾನಸಿಕವಾಗಿ, ಸಿದ್ಧಗೊಳಿಸಲು ತರಬೇತಿ ನೀಡುತ್ತಿರುವುದು ಒಳ್ಳೆಯ ಬೆಳವಣಿಗೆ. ಇಲ್ಲಿನ ಶಾಲೆಯ ಮೂಲಸೌಕರ್ಯಕ್ಕೆ ಬೇಕಿರುವ ಅನುದಾನ ನೀಡುವ ಬಗ್ಗೆ ಕ್ರಮವಹಿಸಲಾಗುವುದು ಎಂದು ಸಚಿವರು ಇದೇ ವೇಳೆ ತಿಳಿಸಿದರು.

ಇನ್ನೂ ಸೈನಿಕ ಶಾಲೆಯ ಪಕ್ಕದಲ್ಲಿ 10 ಎಕರೆ ಪ್ರದೇಶದಲ್ಲಿ ಉದ್ಘಾಟನೆಗೆ ಸಿದ್ಧಗೊಂಡಿರುವ ಸಂಗೊಳ್ಳಿರಾಯಣ್ಣ ಸಮಗ್ರ ಜೀವನ ಚರಿತ್ರೆ ಸಾರುವ ರಾಕ್ ಗಾರ್ಡನ್ ಗೆ ಸಚಿವರು ಭೇಟಿ ನೀಡಿದರು.

ಈಗಾಗಲೇ ರಾಕ್ ಗಾರ್ಡನ್ ನಲ್ಲಿ ಬಹುತೇಕ ಕಾಮಗಾರಿಗಳು ಪೂರ್ಣಗೊಂಡಿದ್ದು, ಶೀಘ್ರವೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಕ್ ಗಾರ್ಡನ್ ಉದ್ಘಾಟಿಸಲಿದ್ದಾರೆ ಎಂದು ಸಚಿವ ಶಿವರಾಜ್ ತಂಗಡಗಿ ತಿಳಿಸಿದರು. ಈ ಸಂದರ್ಭದಲ್ಲಿ ಕ್ರಾಂತಿವೀರ ಸಂಗೊಳ್ಳಿರಾಯಣ್ಣ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಮಲ್ಲೇಶಪ್ಪ ಹೊರಪೇಟೆ, ಸೈನಿಕ ಶಾಲೆ ಪ್ರಾಂಶುಪಾಲ ಕೆ.ಟಿ.ಕರಮಚಂದನ್ ಹಾಗೂ ಇನ್ನಿತರ ಅಧಿಕಾರಗಳು ಹಾಜರಿದ್ದರು.

> ನಮ್ಮ ಸೈನಿಕ ಶಾಲೆಯ ಮಕ್ಕಳಲ್ಲಿ ಕೇವಲ ಅಕ್ಷರಏಕತೆಯನ್ನು ಬೀಜ ಬಿತ್ತದೆ ರಾಷ್ಟ್ರೀಯ ಏಕತೆ, ಸಮಗ್ರತೆ, ದೇಶಭಕ್ತಿ, ಸಾಮಾಜಿಕ ಹೊಣೆಗಾರಿಕೆ ನಿಭಾಯಿಸುವುದನ್ನೂ ಕಲಿಸಿಕೊಡಲಾಗುತ್ತದೆ. ಹಾಗೆಯೇ ಇತರರತ್ತ ಬೆರಳು ಮಾಡದೆ ತನ್ನ ಬದ್ಧತೆಯನ್ನು ಪ್ರಾಮಾಣಿಕವಾಗಿ ನಿರ್ವಹಿಸುವಂಥ ಶಿಕ್ಷಣ ನೀಡಲಾಗುತ್ತದೆ.
>
> **ಶಿವರಾಜ್ ತಂಗಡಗಿ, ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು**

## 7 ಕಾಮಗಾರಿ ಕ್ರಿಯಾಯೋಜನೆಗೆ ಅನುಮೋದನೆ



ಬೆಳಗಾವಿ: ಸುವರ್ಣ ಸೌಧ: 2023–24ನೇ ಸಾಲಿನ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (ಕೆಕೆಆರ್ಡಿಬಿ)ಯ ಯೋಜನೆಯ ಕಲಬುರಗಿ ಜಿಲ್ಲಾ ಸಲಹಾ ಸಮಿತಿ ಸಭೆಯಲ್ಲಿ ಮೈಕ್ರೋ ಮತ್ತು ಮ್ಯಾಕ್ರೋ ಅಡಿಯ ಏಳು ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಯಿತು. ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ಗುರುವಾರ ಜಿಲ್ಲಾ ಸಲಹಾ ಸಮಿತಿ ಸಭೆಯ ಅಧ್ಯಕ್ಷರಾದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ತಂತ್ರಜ್ಞಾನ ಸಚಿವರಾದ ಪ್ರಿಯಾಂಕ್ ಖರ್ಗೆ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಅಂಗೀಕಾರ ದೊರೆತಿದೆ. 2023–24ನೇ ಸಾಲಿನ ರೂ. 50878.48 ಲಕ್ಷಗಳ ಮೈಕ್ರೋ ಅನುದಾನದ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಯಿತು. 2023–24ನೇ ಸಾಲಿನ ರೂ. 21805.06 ಲಕ್ಷಗಳ ಮ್ಯಾಕ್ರೋ ಅನುದಾನದ ಕ್ರಿಯಾ ಯೋಜನೆಗೆ ಒಪ್ಪಿಗೆ ನೀಡಲಾಯಿತು.

2023–24ನೇ ಸಾಲಿನ ಮ್ಯಾಕ್ರೋ ಅನುದಾನದಲ್ಲಿ ಮಂಡಳಿಯಿಂದ ಸ್ವೀಕೃತವಾದ ರೂ. 3047.76 ಲಕ್ಷಗಳ 04 ಕಾಮಗಾರಿಗಳಿಗೆ ಅಂಗೀಕಾರ ನೀಡಲಾಯಿತು. 2018–19ನೇ ಸಾಲಿನಿಂದ 2021–22ನೇ ಸಾಲಿನವರೆಗೆ ಮ್ಯಾಕ್ರೋ ಅಡಿಯಲ್ಲಿ ಆರ್ಥಿಕವಾಗಿ ಪೂರ್ಣಗೊಂಡ ಕಾಮಗಾರಿಗಳಲ್ಲಿ ಉಳಿತಾಯವಾದ ಅನುದಾನದಲ್ಲಿ ರೂ.360.97 ಲಕ್ಷಗಳ ಅನುದಾನದ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಯಿತು. .

2018–19ನೇ ಸಾಲಿನಿಂದ 2021–22ನೇ ಸಾಲಿನವರೆಗೆ ಮೈಕ್ರೋ ಅಡಿಯಲ್ಲಿ ಆರ್ಥಿಕವಾಗಿ ಪೂರ್ಣಗೊಂಡ ಕಾಮಗಾರಿಗಳಲ್ಲಿ ಉಳಿತಾಯವಾದ ಅನುದಾನದಲ್ಲಿ ರೂ.2307.71 ಲಕ್ಷಗಳ ಅನುದಾನಕ್ಕೆ ಕ್ರಿಯಾ ಯೋಜನೆಗೆ ಒಪ್ಪಿಗೆ ನೀಡಲಾಯಿತು. 2022–23ನೇ ಸಾಲಿನ ಮೆಗಾ ಮ್ಯಾಕ್ರೋ (ಬೃಹತ್) ಕ್ರಿಯಾ ಯೋಜನೆಯಲ್ಲಿ ಭೌತಿಕವಾಗಿ ಪ್ರಾರಂಭವಾಗದೇ ಇರುವ ಕಾಮಗಾರಿಗಳಲ್ಲಿ ಟೆಂಡರ ಆಗಿರುವ ಮತ್ತು ಟೆಂಡರ ಆಗದೇ ಇರುವ ಒಟ್ಟು 326 ಕಾಮಗಾರಿಗಳಿಗೆ ಸಮ್ಮತಿ ನೀಡಲಾಯಿತು. ಸಭೆಯಲ್ಲಿ ಕಲಬುರಗಿ ಜಿಲ್ಲಾ ಸಲಹಾ ಸಮಿತಿಯ ಸದಸ್ಯರಾದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವ ಡಾ. ಶರಣಪ್ರಕಾಶ ಪಾಟೀಲ, ಕೆ.ಕೆ.ಆರ್ಡಿ.ಬಿ. ಅಧ್ಯಕ್ಷ ಡಾ. ಅಜಯಸಿಂಗ್, ಶಾಸಕರಾದ ಬಿ.ಆರ್. ಪಾಟೀಲ, ಎಂ.ವೈ. ಪಾಟೀಲ, ಅಲ್ಲಮಪ್ರಭು ಪಾಟೀಲ, ಬಸವರಾಜ ಮತ್ತಿಮಡು, ವಿಧಾನ ಪರಿಷತ್ ಶಾಸಕರಾದ ಸುನೀಲ ವಾಲ್ಯಪುರೆ, ಶಶೀಲ ಜಿ. ನಮೋಶಿ, ಬಿ.ಜಿ. ಪಾಟೀಲ, ಡಾ. ಚಂದ್ರಶೇಖರ ಪಾಟೀಲ ಹುಮನಾಬಾದ, ಡಾ. ತಳವಾರ ಸಾಬಣ್ಣ, ತಿಮ್ಮಣಪ್ಪ ಕಮಕನೂರ, ಕಲಬುರಗಿ ಮಹಾನಗರ ಪಾಲಿಕೆ ಮಹಾಪೌರ ವಿಶಾಲ ಎಸ್. ದರ್ಗಿ, ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ, ಕಲಬುರಗಿ ಮಹಾನಗರ ಪಾಲಿಕೆ ಆಯುಕ್ತ ಪಾಟೀಲ ಭುವನೇಶ ದೇವಿದಾಸ್, ಲೋಕೋಪಯೋಗಿ, ಕೆ.ಕೆ.ಆರ್ಡಿ.ಬಿ. ಸೇರಿದಂತೆ ಮತ್ತಿತರ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು. ಕಲಬುರಗಿಯಿಂದ ವಿಡಿಯೋ ಕಾನ್ಫ್ರೆನ್ಸ್ ಮೂಲಕ ಕೆ.ಕೆ.ಆರ್ಡಿ.ಬಿ. ಕಾರ್ಯದರ್ಶಿ ಎಂ. ಸುಂದರೇಶ ಬಾಬು, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಸಣಸಗಿ ಹಾಗೂ ಸಂಬಂಧಪಟ್ಟ ಎಲ್ಲಾ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

## ಬೆಂಗಳೂರನ್ನು ವಾಸಯೋಗ್ಯ ನಗರವಾಗಿಸಲು ಕ್ರಮ

ಬೆಳಗಾವಿ ಸುವರ್ಣಸೌಧ: ಬೆಂಗಳೂರನ್ನು ಜಾಗತಿಕ ಮಟ್ಟದ ವಾಸಯೋಗ್ಯ ನಗರವನ್ನಾಗಿ ರೂಪಿಸಲು ಉದ್ದೇಶಿಸಲಾಗಿದೆ ಎಂದು ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ ಅವರು ವಿಧಾನ ಪರಿಷತ್‌ನಲ್ಲಿ ಹೇಳಿದರು. ಸದಸ್ಯೆ ಭಾರತಿ ಶೆಟ್ಟಿಯವರ 122ನೇ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ಬೆಂಗಳೂರು ದಿನೇದಿನೆ ಬೆಳೆಯುತ್ತಿರುವ ಮಹಾನಗರ. ಸಹಜವಾಗಿ ಸಂಚಾರ ದಟ್ಟಣೆ ಹೆಚ್ಚುತ್ತಿದೆ. ಕಸ ವಿಲೇವಾರಿಯದ್ದು ದೊಡ್ಡ ದಂಧೆಯಾಗಿದೆ. ಇದಕ್ಕೆಲ್ಲ ಕಡಿವಾಣ ಹಾಕಲಾಗುತ್ತಿದೆ. ಬೆಂಗಳೂರಿನ ಘನತಾಜ್ಯ ನಿರ್ವಹಣೆಗಾಗಿ ಕನಿಷ್ಟ ಮೂರು ದಿಕ್ಕುಗಳಲ್ಲಿ ಸುಮಾರು ತಲಾ 100 ಎಕರೆ ಪ್ರದೇಶದಲ್ಲಿ ಎಲ್ಲಾ ಬಗೆಯ ತ್ಯಾಜ್ಯಗಳ ಸಂಸ್ಕರಣಾ ಘಟಕಗಳನ್ನು ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ನಿಗಮ ನಿಯಮಿತದ ಮೂಲಕ ಸ್ಥಾಪಿಸಲು ಯೋಜಿಸಲಾಗಿದೆ ಎಂದು ತಿಳಿಸಿದರು. ಬೆಂಗಳೂರನ್ನು ಉನ್ನತ ಮಟ್ಟಕ್ಕೆ ವಿಸ್ತರಿಸುವ ಯೋಚನೆಯಡಿ ಈಗಾಗಲೇ ಬೆಂಗಳೂರು ಪರಿಕಲ್ಪನೆಯನ್ನು ಘೋಷಿಸಲಾಗಿದೆ. ಈ ಯೋಜನೆಗೆ ಸಂಬಂಧಿಸಿದಂತೆ 70,000 ಕ್ಕು ಹೆಚ್ಚು ಅಭಿಪ್ರಾಯ ಸಲಹೆಗಳು ನಾಗರಿಕರು ಮತ್ತು ತಜ್ಞರಿಂದ ಆನ್‌ಲೈನ್ ಮೂಲಕ ಸ್ವೀಕೃತಗೊಂಡಿವೆ.

## ಪಿಂಚಣಿ ಅದಾಲತ್ ಡಿ.18ರಂದು

ಬಳ್ಳಾರಿ: ಅಂಚೆ ಇಲಾಖೆಯಿಂದ ನಿವೃತ್ತರಾದ ಸರ್ಕಾರದಿಂದ ಪಿಂಚಣಿ ಪಡೆಯುತ್ತಿರುವ ಇಲಾಖಾ ನೌಕರರಿಗಾಗಿ ಮತ್ತು ಕುಟುಂಬ ಪಿಂಚಣಿ ಪಡೆಯುತ್ತಿರುವ ನಿವೃತ್ತ ಅಂಚೆ ನೌಕರರ ಕುಟುಂಬದವರಿಗಾಗಿ ಡಿ.18ರಂದು ಸಂಜೆ 4ಕ್ಕೆ ಬಳ್ಳಾರಿ ವಿಭಾಗ ಅಂಚೆ ಕಚೇರಿಯಲ್ಲಿ ಪಿಂಚಣಿ ಅದಾಲತ್ ಆಯೋಜಿಸಲಾಗಿದೆ. ಪಿಂಚಣಿದಾರರು ತಮ್ಮ ಕುಂದು–ಕೊರತೆಗಳಿದ್ದರೆ ಅಂಚೆ ಅಧೀಕ್ಷಕರು, ಬಳ್ಳಾರಿ ವಿಭಾಗ, ವಿಭಾಗೀಯ ಕಾರ್ಯಾಲಯ ಕೋಟೆ, ಬಳ್ಳಾರಿ, ಅವರಿಗೆ ಡಿ.18 ಮುಂಚಿತವಾಗಿ ತಲಪುವಂತೆ ಪತ್ರ ಮುಖೇನ ಅಥವಾ doballari.ka@indiapost.gov.in ಗೆ ಇ–ಮೇಲ್ ಮುಖಾಂತರ ಕಳುಹಿಸಿಕೊಡಬಹುದು.

## ರಾಜಹಂಸಗಡ ಕೋಟೆಗೆ ಗಾಲಿ ಜನಾರ್ಧನ ರೆಡ್ಡಿ ಭೇಟಿ



ಬೆಳಗಾವಿ: ವಿಧಾನಸಭೆ ಅಧಿವೇಶನದ ಬಿಡುವಿನ ವೇಳೆ ಗಂಗಾವತಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಹಾಗೂ ಮಾಜಿ ಸಚಿವರಾದ ಗಾಲಿ ಜನಾರ್ದನ ರೆಡ್ಡಿ ಅವರು ಬೆಳಗಾವಿಯ ರಾಜಹಂಸಗಡದ ಕೋಟೆಗೆ ಭೇಟಿ ನೀಡಿದರು. ಕೋಟೆಯ ಶ್ರೀ ಸಿದ್ದೇಶ್ವರ ಸ್ವಾಮಿ ದೇವಸ್ಥಾನಕ್ಕೆ ತೆರಳಿ ಪೂಜೆ ಸಲ್ಲಿಸಿ ತದನಂತರ ಶಿವಾಜಿ ಮಹಾರಾಜರ ಪುತ್ತಳಿಗೆ ಹೂವಿನ ಹಾರವನ್ನು ಹಾಕುವ ಮೂಲಕ ನಮಿಸಿದರು. ಹಾಗೂ ಕೋಟೆಯ ಸುತ್ತಮುತ್ತಲಿನ ಆವರಣದಲ್ಲಿ ಕೆಲಕಾಲ ಸಂತೋಷದಿಂದ ಸಮಯ ಕಳೆದರು.

ಈ ಹಿಂದೆ ಪ್ರವಾಸೋದ್ಯಮ ಸಚಿವರಾಗಿದ್ದ ಗಾಲಿ ಜನಾರ್ಧನ ರೆಡ್ಡಿ ಅವರು ಅಂದಿನ ಶಾಸಕರಾಗಿದ್ದ ಸಂಜಯ್ ಪಾಟೀಲ್ ಹಾಗೂ ಸಂಸದರಾದ ಸುರೇಶ್ ಅಂಗಡಿ ಅವರ ಜೊತೆಯಲ್ಲಿ 14 ವರ್ಷಗಳ ಹಿಂದೆ ರಾಜಹಂಸಗಡಕ್ಕೆ ಭೇಟಿ ನೀಡಿ ಆ ಪ್ರದೇಶವನ್ನೆಲ್ಲಾ ವೀಕ್ಷಿಸಿ, ರಾಜಹಂಸಗಡವನ್ನು ಅಭಿವೃದ್ಧಿ ಮಾಡುವ ಕನಸು ಕಂಡು ಸುಮಾರು 11 ಕೋಟಿ ಹಣದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದರು. ಅದಾದ ಬಳಿಕ 14 ವರ್ಷಗಳ ಬಳಿಕ ರಾಜಹಂಸಗಡಕ್ಕೆ ಭೇಟಿ ನೀಡಿದ್ದಾರೆ.

## ಕುಡುಕರಲ್ಲ, ನಾವು ಮದ್ಯಪ್ರಿಯರು: ಮದ್ಯಪಾನ ಪ್ರಿಯರ ಹೋರಾಟ ಸಂಘ




ಬೆಳಗಾವಿ: 'ಬೇಡಿಕೆಗಳನ್ನು ಈಡೇರಿಸಲು ಆಗ್ರಹಿಸಿ ಸರ್ಕಾರದ ಮೇಲೆ ಒತ್ತಡ ಹೇರುವ ಹಕ್ಕು ನಮಗೂ ಇದೆ' ಎಂದು ಕರ್ನಾಟಕ ಮದ್ಯಪಾನ ಪ್ರಿಯರ ಹೋರಾಟ ಸಂಘದ ಸದಸ್ಯರು ಗುರುವಾರ ಸುವರ್ಣ ವಿಧಾನಸೌಧದ ಬಳಿ ಪ್ರತಿಭಟನೆ ನಡೆಸಿದರು. 'ಮದ್ಯ ಕುಡಿದು ನಾವು ಸರ್ಕಾರಕ್ಕೆ ಎಷ್ಟೊಂದು ಆದಾಯ ಕೊಡುತ್ತೇವೆ. ನಮಗಾಗಿ ಸರ್ಕಾರವೂ ಒಂದಿಷ್ಟು ಯೋಜನೆ ರೂಪಿಸಬೇಕಲ್ಲವೇ' ಎಂದು ಸಂಘದ ಪ್ರಮುಖರು ಪ್ರಶ್ನಿಸಿದರು. ಮನವಿ ಸ್ವೀಕರಿಸಲು ಬಂದ ಸಚಿವ ಸಂತೋಷ್ ಲಾಡ್ ಅವರ ಎದುರು ಅಳಲು ತೋಡಿಕೊಂಡ ಅವರು, 'ಕುಡುಕ' ಎಂಬ ಪದಬಳಕೆಯನ್ನು ಸರ್ಕಾರ ನಿಷೇಧಿಸಬೇಕು. ನಮ್ಮನ್ನು ಮದ್ಯಪ್ರಿಯರು ಎಂದು ಕರೆದರೆ ತಪ್ಪೇನಿಲ್ಲ' ಎಂದರು. 'ನಿತ್ಯ ದುಡಿ. ಸತ್ಯ ನುಡಿ. ಸ್ವಲ್ಪ ಕುಡಿ. ಮನೆಗೆ ನಡಿ' ಎಂಬ ಘೋಷವಾಕ್ಯದಂತೆ ನಾವು ಬಾಳ್ವೆ ನಡೆಸಿದ್ದೇವೆ. ಒಂದು ಸಾವಿರ ರೂಪಾಯಿ ದುಡಿದರೆ, ? 100 ಮದ್ಯಕ್ಕೆ ಖರ್ಚು ಮಾಡ್ತೀವಿ. ಉಳಿದ 900 ಕುಟುಂಬಕ್ಕೆ ಕೊಡ್ತೀವಿ' ಎಂದು ಸಮರ್ಥಿಸಿಕೊಂಡರು.

'ಒಂದೆಡೆ ಮದ್ಯ ಮಾರಾಟಕ್ಕೆ ಮಳಿಗೆಗಳಿಗೆ ಸರ್ಕಾರ ಪರವಾನಗಿ ನೀಡುತ್ತದೆ. ಮತ್ತೊಂದೆಡೆ, ಮದ್ಯ ಸೇವಿಸಿ ವಾಹನ ಚಲಾಯಿಸುವವರಿಗೆ ದಂಡ ವಿಧಿಸುವುದು ಎಷ್ಟು ಸರಿ?' ಎಂದು ಅವರು ವಾದಿಸಿದರು. 'ಈಗ ತಂತ್ರಜ್ಞಾನ ಕ್ಷೇತ್ರ ಸಾಕಷ್ಟು ಬೆಳೆದಿದೆ. ಮದ್ಯ ಸೇವಿಸಿದವರು ವಾಹನವೇರಿದರೆ, ಸ್ಟಾರ್ಟ್ ಆಗದಂತೆ ಸೆನ್ಸರ್‌ಅ ಳವಡಿಸಿ' ಎಂದು ಸಲಹೆಯನ್ನೂ ಕೊಟ್ಟರು.

ಪ್ರತಿಯೊಂದು ಬೇಡಿಕೆಗಳನ್ನು ಆಲಿಸಿದ ಸಚಿವರು ಕೆಲ ಕ್ಷಣ ತಬ್ಬಿಬ್ಬಾದರು. ನಂತರ ನಗೆ ಬೀರುತ್ತ, 'ನಿಮ್ಮ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತರುವೆ' ಎಂದು ಭರವಸೆ ನೀಡಿದರು.

## ನೀರು ಬಳಕೆ ನಿಯಂತ್ರಣಕ್ಕೆ ಕಾನೂನು

ವಿಧಾನಸಭೆ: ಬೃಹತ್ ನೀರಾವರಿ ಕಾಲುವೆಗಳಿಂದ ನೇರವಾಗಿ ನೀರೆತ್ತುವುದನ್ನು ನಿಯಂತ್ರಿಸಲು ಹೊಸ ಕಾನೂನು ತರಲಾಗುವುದು ಎಂದು ಜಲಸಂಪನ್ಮೂಲ ಸಚಿವರೂ ಆದ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು. ಬಿಜೆಪಿಯ ಬಿ.ಪಿ. ಹರೀಶ್ ಅವರ ಗಮನ ಸೆಳೆಯುವ ಸೂಚನೆಗೆ ಉತ್ತರಿಸಿದ ಅವರು, 'ಕಾಲುವೆಗಳಿಗೆ ನೇರವಾಗಿ ಮೋಟಾರ್ ಅಳವಡಿಸಿ ನೀರೆತ್ತುವುದು ಮತ್ತು ಕಾಲುವೆಗಳ ಪಕ್ಕದಲ್ಲೇ ಕೊಳವೆ ಬಾವಿಗಳನ್ನು ಕೊರೆಯುವುದರಿಂದ ಕೊನೆಯ ಭಾಗಕ್ಕೆ ನೀರು ಹರಿಸಲು ಆಗುತ್ತಿಲ್ಲ. ಆದ್ದರಿಂದ ಹೊಸ ಕಾನೂನು ಜಾರಿಗೊಳಿಸಿ ಕಾಲುವೆಗಳಿಗೆ ನೇರವಾಗಿ ಪಂಪ್ ಅಳವಡಿಸುವುದು ಮತ್ತು ಸಮೀಪದಲ್ಲಿ ಕೊಳವೆ ಬಾವಿ ಕೊರೆಯುವುದನ್ನು ನಿರ್ಬಂಧಿಸುವ ಪ್ರಸ್ತಾವವಿದೆ' ಎಂದರು. ಎತ್ತಿನಹೊಳೆ ಯೋಜನೆಯಲ್ಲಿ ಈ ರೀತಿಯ ನಿರ್ಬಂಧ ಹೇರುವುದು ಅನಿವಾರ್ಯವಾಗಿದೆ. ಅಲ್ಲಿನ ಕಾಲುವೆಗಳಿಗೆ ಪಂಪ್‌ಸೆಟ್ ಅಳವಡಿಸಿ ನೀರೆತ್ತುವುದನ್ನು ನಿಷೇಧಿಸಲಾಗುವುದು. ಕಾಲುವೆಯಿಂದ ಒಂದು ಕಿಲೋಮೀಟರ್ ದೂರದವರೆಗೆ ಕೊಳವೆ ಬಾವಿ ಕೊರೆಯದಂತೆ ನಿರ್ಬಂಧ ಹೇರುವುದಕ್ಕೂ ಯೋಚಿಸಲಾಗಿದೆ. ವಿಧಾನಮಂಡಲದ ಮುಂದಿನ ಅಧಿವೇಶನದಲ್ಲೇ ಈ ಕುರಿತ ಮಸೂದೆಯನ್ನು ಮಂಡಿಸಲಾಗುವುದು ಎಂದು ತಿಳಿಸಿದರು.

ಹರಿಹರ ತಾಲ್ಲೂಕಿನ ಭೈರನಪಾದ ಏತ ನೀರಾವರಿ ಯೋಜನೆ ಕಾಮಗಾರಿಗೆ ತ್ವರಿತವಾಗಿ ಚಾಲನೆ ನೀಡಬೇಕೆಂಬ ಹರೀಶ್ ಆಗ್ರಹಕ್ಕೆ ಪ್ರತಿಕ್ರಿಯಿಸಿದ ಶಿವಕುಮಾರ್, 'ಭದ್ರಾ ಮೇಲ್ದಂಡೆ ಯೋಜನೆಗೆ ? 5,000 ಕೋಟಿ ಅನುದಾನ ನೀಡುವುದಾಗಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಬಜೆಟ್‌ನಲ್ಲಿ ಘೋಷಿಸಿದ್ದರು. ಆ ಅನುದಾನ ದೊರೆತರೆ ಯೋಜನೆ ಪೂರ್ಣಗೊಳಿಸಬಹುದು. ಎಲ್ಲರೂ ಒಟ್ಟಾಗಿ ದೆಹಲಿಗೆ ಹೋಗಿ ಒತ್ತಾಯಿಸೋಣ' ಎಂದರು. 'ಈ ಬಾರಿಯೂ ಸೇರಿದಂತೆ ಮೂರು ಬಾರಿ ನಮ್ಮ ಕ್ಷೇತ್ರದ ಶಾಸಕರು ವಿರೋಧ ಪಕ್ಷದಲ್ಲೇ ಇದ್ದೇವೆ. ಹೀಗಾಗಿ ಭೈರನಪಾದ ಯೋಜನೆ ಅನುಷ್ಠಾನದ ಬಗ್ಗೆ ನಮ್ಮ ಕ್ಷೇತ್ರದ ಜನರಲ್ಲಿ ಅನುಮಾನ ಮೂಡಿದೆ' ಎಂದು ಹರೀಶ್ ಹೇಳಿದರು. 'ಹಾಗಿದ್ದರೆ ಈ ಕಡೆ ಬರುವ ಬಗ್ಗೆ ನೀವೇ ನಿರ್ಧರಿಸಿ' ಎಂದು ಶಿವಕುಮಾರ್ ಆಹ್ವಾನ ನೀಡಿದರು.

**ಪಟ್ಟಣ ಪಂಚಾಯತ ಕಾಗವಾಡ**

ತಾ:: ಕಾಗವಾಡ (STD 08331 200174) ಜಿ::ಬೆಳಗಾವಿ

Website:www.kagawadtown.mrc.gov.in E-Mail:itstaff_ulb_kagawad@yahoo.com

ಕ್ರಮ ಸಂಖ್ಯೆ:ಪಪಂಕಾ:ಕಾಮಗಾರಿ:2023–24 ದಿನಾಂಕ: 13–12–2023

**॥ಟೆಂಡರ ಪ್ರಕಟಣೆ॥ ॥ ಕರ್ನಾಟಕ ಸಾರ್ವಜನೀಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ ಮಾತ್ರ ॥ (ಕರ್ನಾಟಕ ಪಾರದರ್ಶಕ ಅಧಿನಿಯಮ 2000 ರನ್ವಯ)**

ಕಾಗವಾಡ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ ಸನ್ 2023–24ನೇ ಸಾಲಿನ ಎಸ್.ಎಫ್.ಸಿ ಮುಕ್ತನಿಧಿ ಅನುದಾನ ಹಾಗೂ 15ನೇ ಹಣಕಾಸು ಸಾಮಾನ್ಯ ಮೂಲ ಅನುದಾನದಡಿಯಲ್ಲಿ ಈ ಕೆಳಗೆ ವಿವರಿಸಿದ ಕಾಮಗಾರಿಗೆ ಲೋಕೋಪಯೋಗಿ/ಪಂಚಾಯತ ರಾಜ ಇಲಾಖೆಯಲ್ಲಿ ನೋಂದಾಯಿಸಲ್ಪಟ್ಟ ಅರ್ಹ ಸಿವ್ಹಿಲ್ ಗುತ್ತಿಗೆದಾರರು ಕೆಡಬ್ಲ್ಯೂ–1&2ರ ಪ್ರಕಾರ ಟೆಂಡರನ್ನು ಆಹ್ವಾನಿಸಲಾಗಿದೆ. ಇಚ್ಛೆಯುಳ್ಳ ಗುತ್ತಿಗೆದಾರರು ಕರ್ನಾಟಕ ಸಾರ್ವಜನೀಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ ಮಾತ್ರ ಬಿಡ್ ಸಲ್ಲಿಸಬಹುದು. ಕಾಮಗಾರಿಗಳ ವಿವರ ಈ ಕೆಳಗಿನಂತಿದೆ.

ಪ್ಯಾ ನಂ:01:ಕಾಮಗಾರಿ ಇಂಡೆಂಟ್ ನಂಬರ:DMA/2023-24/OW/WORK_INDENT9619,ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ):10.64, ಇ.ಎಂ.ಡಿ ಮೊತ್ತ (ರೂ.ಗಳಲ್ಲಿ):26600, ಗುತ್ತಿಗೆದಾರರ ಮಿಸಲಾತಿ ವಿವರ:ಸಾಮಾನ್ಯ, ಪ್ಯಾನಂ:02:ಕಾಮಗಾರಿ ಇಂಡೆಂಟ್ ನಂಬರ:DMA/2023-24/BD/WORK_INDENT9621, ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ):10.00,ಇ.ಎಂ.ಡಿ ಮೊತ್ತ (ರೂ.ಗಳಲ್ಲಿ):25000, ಗುತ್ತಿಗೆದಾರರ ಮಿಸಲಾತಿ ವಿವರ:ಸಾಮಾನ್ಯ, ಪ್ಯಾನಂ:03:ಕಾಮಗಾರಿ ಇಂಡೆಂಟ್ ನಂಬರ:DMA/2023-24/BD/WORK_INDENT9622, ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ):10.00, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ):12500, ಗುತ್ತಿಗೆದಾರರ ಮಿಸಲಾತಿ ವಿವರ:ಎಸ್.ಟಿ, ಪ್ಯಾನಂ:04: ಕಾಮಗಾರಿ ಇಂಡೆಂಟ್ ನಂಬರ:DMA/2023-24/BD/WORK_INDENT9623, ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ):9.84, ಇ.ಎಂ.ಡಿ ಮೊತ್ತ (ರೂ. ಗಳಲ್ಲಿ):12300, ಗುತ್ತಿಗೆದಾರರ ಮಿಸಲಾತಿ ವಿವರ:ಎಸ್.ಸಿ, ಪ್ಯಾನಂ:05: ಕಾಮಗಾರಿ ಇಂಡೆಂಟ್ ನಂಬರ:DMA/2023-24/OW/WORK_INDENT9624,ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ):13.00,ಇ.ಎಂ.ಡಿ ಮೊತ್ತ (ರೂ.ಗಳಲ್ಲಿ):32500, ಗುತ್ತಿಗೆದಾರರ ಮಿಸಲಾತಿ ವಿವರ:ಸಾಮಾನ್ಯ,ಪ್ಯಾನಂ:06:ಕಾಮಗಾರಿ ಇಂಡೆಂಟ್ ನಂಬರ:DMA/2023-24/RD/WORK_INDENT9626,ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ): 25.00, ಇ.ಎಂ.ಡಿ ಮೊತ್ತ (ರೂ.ಗಳಲ್ಲಿ):62500, ಗುತ್ತಿಗೆದಾರರ ಮಿಸಲಾತಿ ವಿವರ:ಸಾಮಾನ್ಯ, ಪ್ಯಾನಂ:07:ಕಾಮಗಾರಿ ಇಂಡೆಂಟ್ ನಂಬರ:DMA/2023-24/OW/WORK_INDENT9628, ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ):12.20, ಇ.ಎಂ.ಡಿ ಮೊತ್ತ (ರೂ.ಗಳಲ್ಲಿ):30500, ಗುತ್ತಿಗೆದಾರರ ಮಿಸಲಾತಿ ವಿವರ:ಸಾಮಾನ್ಯ, ಪ್ಯಾನಂ:08:ಕಾಮಗಾರಿ ಇಂಡೆಂಟ್ ನಂಬರ:DMA/2023-24/WS/WORK_INDENT9629, ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ):33.90, ಇ.ಎಂ.ಡಿ ಮೊತ್ತ (ರೂ.ಗಳಲ್ಲಿ) :33900, ಗುತ್ತಿಗೆದಾರರ ಮಿಸಲಾತಿ ವಿವರ:ಎಸ್.ಸಿ.

ಟೆಂಡರ ಫಾರ್ಮ ವೆಬ್ ಸೈಟಿನಿಂದ ಡೌನ್ ಲೋಡ ಮಾಡಿಕೊಳ್ಳುವ ಪ್ರಾರಂಭದ ದಿನಾಂಕ: 14–12–2023, ಭರ್ತಿ ಮಾಡಿದ ಟೆಂಡರಗಳನ್ನು ಅಪಲೋಡ್ (Upload) ಮಾಡುವ ಕೊನೆಯ ದಿನಾಂಕ: 22–12–2023 ಸಾಯಂಕಾಲ:4:00 ಘಂಟೆಯವರೆಗೆ, ಟೆಂಡರಗಳನ್ನು ತೆರೆಯುವ ದಿನಾಂಕ:23–12–2023ರ ಸಾಯಂಕಾಲ 5.00 ಘಂಟೆಯ ನಂತರ ತೆರೆಯಲಾಗುವುದು. ಹೆಚ್ಚಿನ ಮಾಹಿತಿಗಾಗಿ Website:www. kagawad town.mrc.gov.in & www.KPPP.karnataka.gov.in ವೆಬ್‌ಸೈಟನಲ್ಲಿ ನೋಡಬಹುದು

ಸಹಿ/–ಮುಖ್ಯಾಧಿಕಾರಿ
ಪಟ್ಟಣ ಪಂಚಾಯತ ಕಾಗವಾಡ

ಸಹಿ/–ಆಡಳಿತಾಧಿಕಾರಿಗಳು
ಪಟ್ಟಣ ಪಂಚಾಯತ ಕಾಗವಾಡ
& ತಹಶಿಲ್ದಾರರು ಕಾಗವಾಡ

DIPR/BGM/RO-NO-755/MCA/2023-24

